ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 206
7–2–2025 ಶುಕ್ರವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 206

ನಕಲಿ ಪತ್ರಕರ್ತರ ಹಾವಳಿ ಹೆಚ್ಚಳ, ತಡೆಗೆ ಕಠಿಣ ಕ್ರಮ ಅನಿವಾರ್ಯ : ಗಂಗಾಧರಸ್ವಾಮಿ

ದಾವಣಗೆರೆ : ಜಿಲ್ಲೆಯಲ್ಲಿ ನಕಲಿ ಪತ್ರಕರ್ತರ ಹಾವಳಿ ಹೆಚ್ಚಿದ್ದು ಸಾರ್ವಜನಿಕರು ಹಾಗೂ ಅಧಿಕಾರಿಗಳಿಗೆ ಬೆದರಿಕೆ ಹಾಕುವುದು ಕಂಡು ಬಂದಿದ್ದು ಇದಕ್ಕೆ ಕಠಿಣ ಕ್ರಮ ಕೈಗೊಳ್ಳಬೇಕೆಂದು ಪತ್ರಕರ್ತರ ಸಮೂಹ ಒತ್ತಾಯಿಸಿದೆ. ಪತ್ರಕರ್ತರೆಂದು ಹೇಳಿಕೊಂಡು ಬೆದರಿಕೆ ಹಾಕುವುದು ಮತ್ತು ಇತರೆ ಉದ್ದೇಶಕ್ಕೆ ಒತ್ತಾಯಿಸುವುದು ಕಂಡು ಬಂದಲ್ಲಿ ತಕ್ಷಣ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಅಥವಾ ವಾರ್ತಾ ಇಲಾಖೆಗೆ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದ್ದಾರೆ.

ಉಪಗ್ರಹ ಆಧಾರಿತ ವಿದ್ಯುನ್ಮಾನ ಸುದ್ದಿವಾಹಿನಿಗಳಲ್ಲಿ ವರದಿಗಾರರಾಗಿ ಕೆಲಸ ಮಾಡುತ್ತಿದ್ದಲ್ಲಿ ಮತ್ತು ಮುದ್ರಣ ಮಾಧ್ಯಮ ಆರ್.ಎನ್.ಐ.ಅನ್ವಯ ನಿಯಮಬದ್ಧವಾಗಿ ಹಾಗೂ ಕ್ರಮಬದ್ಧವಾಗಿ ಪ್ರಸಾರ ಹೊಂದಿರುವ ಪತ್ರಿಕೆ–ಯ ಸಂಪಾದಕರು, ವರದಿಗಾರರನ್ನು ಮಾಧ್ಯಮ ಪ್ರತಿನಿಧಿಗಳೆಂದು ಗುರುತಿಸಲಾಗುತ್ತದೆ. ಆದರೆ ಸೋಷಿಯಲ್ ಮೀಡಿಯಾವನ್ನು ಅಂದರೆ ಯೂಟ್ಯೂಬ್‌ನ್ನು ಮಾಧ್ಯಮ ಪ್ರತಿನಿಧಿ ಎಂದು ಕರೆಯಲಾಗುವುದಿಲ್ಲ. ಕೆಲವು ವ್ಯಕ್ತಿಗಳು ಜಿಲ್ಲಾಧಿಕಾರಿಗಳ ಹೆಸರು ಮತ್ತು ಪತ್ರಕರ್ತರ ಸಂಘಟನೆಗಳ ಹೆಸರನ್ನೇಳಿ ಬೇಡಿಕೆಗಳನ್ನಿಡುತ್ತಿದ್ದಾರೆ, ಇದಕ್ಕೆ ಕಡಿವಾಣ ಹಾಕಬೇಕೆಂದು ಕಾರ್ಯನಿರತ ಪತ್ರಕರ್ತರ ಒತ್ತಾಯವಾಗಿದ್ದು ಇಂತಹ ನಕಲಿ ಪತ್ರಕರ್ತರು ಕಂಡುಬಂದಲ್ಲಿ ಮಾಹಿತಿ ನೀಡಲು ಕೋರಲಾಗಿದೆ.

ಹಂಪಿ ಉತ್ಸವ : ಕವಿಗೋಷ್ಠಿಗೆ ಹಾಗೂ ಮಹಿಳಾ ವಿಚಾರ ಸಂಕಿರಣಕ್ಕೆ ಅರ್ಜಿ ಅಹ್ವಾನ

ವಿಜಯನಗರ : ಬರುವ ಹಂಪಿ ಉತ್ಸವದಲ್ಲಿ ಶ್ರೀವಿರೂಪಾಕ್ಷ ದೇವಸ್ಥಾನದ ವೇದಿಕೆಯಲ್ಲಿ ನಡೆಯುವ ಕವಿಗೋಷ್ಠಿ, ಮಹಿಳಾ ವಿಚಾರ ಸಂಕಿರಣ ಹಾಗೂ ಯುವ ಕವಿಗೋಷ್ಠಿ ಇದರಲ್ಲಿ ಭಾಗವಹಿಸುವ ಕವಿಗಳು ಹಾಗೂ ಆಸಕ್ತಿಯುಳ್ಳ ಮಹಿಳೆಯರು ಹಾಗೂ ಯುವ ಕವಿಗಳು ತಮ್ಮ ಸ್ವ–ವಿವರ ಹಾಗೂ ದಾಖಲಾತಿಗಳನ್ನು ನೇರವಾಗಿ ಅಥವಾ ಅಂ–ಚೆಯ ಮೂಲಕ 'ನೋಡಲ್ ಅಧಿಕಾರಿಗಳು, ವಿರೂಪಾಕ್ಷ ವೇದಿಕೆ ಹಾಗೂ ಪ್ರಾಚಾರ್ಯರು, ಸರ್ಕಾರಿ ಪದವಿ ಪೂರ್ವ ಕಾಲೇಜು ಚಿತ್ತವಾಡಿಗಿ ಇವರಿಗೆ ಫೆಬ್ರವರಿ 12 ರೊಳಗೆ ಅರ್ಜಿಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿದೆ. ಆಯ್ಕೆ ಸಮಿತಿಯಿಂದ ಮೇಲ್ಕಂಡ ವಿವಿಧ ಗೋಷ್ಠಿಗಳಿಗೆ ಆಯ್ಕೆಯಾದವರಿಗೆ ದೂರವಾಣಿ ಮೂಲಕ ತಿಳಿಸಲಾಗುವುದು. ಹೆಚ್ಚಿನ ವಿವರಗಳಿಗಾಗಿ ಜಗದೀಶ್ ಬೆನ್ನೂರು : ಮೊ.9901106256, ಡಾ.ದಯಾನಂದ ಕೆನ್ನಾಳ್ 9449654234 ಸಂಪರ್ಕಿಸಬಹುದು ಎಂದು ಚಿತವಾಡಿ, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಕ್ಕಳ ಕಲ್ಯಾಣ ಸಮಿತಿ ರಚನೆ

ಚಿಕ್ಕಮಗಳೂರು: ಫೆ. 06: ಜಿಲ್ಲೆಗೆ ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ನೂತನವಾಗಿ ಮಕ್ಕಳ ಕಲ್ಯಾಣ ಸಮಿತಿಯನ್ನು ರಚನೆ ಮಾಡಿ ಸರ್ಕಾರದಿಂದ ಆದೇಶ ಹೊರಡಿಸಲಾಗಿದೆ. ಮಕ್ಕಳ ಕಲ್ಯಾಣ ಸಮಿತಿಯು ಒಟ್ಟು 5 ಜನರ ತಂಡವಾಗಿದೆ. ಈ ತಂಡದಲ್ಲಿ ಅಧ್ಯಕ್ಷೆ ಜಯಶೀಲ ಕೆ.ಆರ್. ಮತ್ತು ಸದಸ್ಯರಾಗಿ ಕುಮಾರ್ ಪಿ., ಜಯಮ್ಮ ಹೆಚ್.ವಿ., ಯಶವಂತ್ ಸಿ.ಎಂ., ಅಪ್ಪು ಎನ್., ನೇಮಕವಾಗಿರುತ್ತಾರೆ. ಸಮಿತಿಯ ಅಧ್ಯಕ್ಷರು ಹಾಗೂ ಎಲ್ಲಾ ಸದಸ್ಯರು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಯನ್ನು ಭೇಟಿ ಮಾಡಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉದ್ಯೋಗ ನೋಂದಣಿ

ಚಿಕ್ಕಮಗಳೂರು: ಫೆ. 06: ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ವತಿಯಿಂದ ಫೆಬ್ರವರಿ 11 ರಂದು ಮಧ್ಯಾಹ್ನ 12:30 ಗಂಟೆಗೆ ತರೀಕೆರೆ ತಾಲ್ಲೂಕಿನ ಬಾವಿಕೆರೆ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಉದ್ಯೋಗ ನೋಂದಣಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಆಸ್ತಕ ಅಲ್ಪಸಂಖ್ಯಾತ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ದೂರವಾಣಿ: 08262–295538 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಾಲಾ ಶಿಕ್ಷಣ ಮತ್ತು ಸಾಕ್ಷಾರತಾ ಸಚಿವರ ಜಿಲ್ಲಾ ಪ್ರವಾಸ

ದಾವಣಗೆರೆ: ರಾಜ್ಯದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪ ಅವರು ಫೆಬ್ರವರಿ 7 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

ಫೆಬ್ರವರಿ 7 ರಂದು ಬೆಳಿಗ್ಗೆ 8.30ಕ್ಕೆ ದಾವಣಗೆರೆ ಜಿಲ್ಲೆಯ ಜಗಳೂರಿಗೆ ಆಗಮಿಸಿ, ನಂತರ ಜಗಳೂರು ಶಾಸಕರಾದ ಬಿ.ದೇವೆಂದ್ರಪ್ಪ ಇವರ ಮನೆಗೆ ಭೇಟಿ ನೀಡುವರು. ಬೆ.9.30ಕ್ಕೆ ಜಗಳೂರು ತಾಲ್ಲೂಕಿನ ಹುಚ್ಚಂಗಿಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆಲಿರುವ ನೂತನ ಶಾಲಾ ಕಟ್ಟಡದ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸುವರು ಬೆಳಿಗ್ಗೆ 10.30ಕ್ಕೆ ಜಗಳೂರಿನಿಂದ ಚಿತ್ರದುರ್ಗಕ್ಕೆ ತೆರಳುವರು.

ಫೆ.10 ರಂದು ಕಾಯಕ ಶರಣರ ಜಯಂತಿ

ಶಿವಮೊಗ್ಗ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಕಾಯಕ ಶರಣರ ಜಯಂತಿ ಕಾರ್ಯಕ್ರಮವನ್ನು ಫೆ.10 ರ ಬೆಳಿಗ್ಗೆ 11.00 ಗಂಟೆಗೆ ಕುವೆಂಪು ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಮಧು ಬಂಗಾರಪ್ಪ ಇವರು ನೆರವೇರಿಸುವರು.

ನಿರ್ಮಾಣ ಹಂತದ ಕಟ್ಟಡದಲ್ಲಿ ಬೆಂಕಿ

ಇಬ್ಬರು ಕಾರ್ಮಿಕರು ಸಜೀವ ದಹನ

ಬೆಂಗಳೂರು: ಬೆಂಗಳೂರಿನ ಉತ್ತರ ತಾಲೂಕಿನ ಸೀಗೆಹಳ್ಳಿಯಲ್ಲಿ ನಿರ್ಮಾಣ ಹಂತದ ನಾಲ್ಕು ಅಂತಸ್ತಿನ ಕಟ್ಟಡವೊಂದರಲ್ಲಿ ಗುರುವಾರ ಮಧ್ಯಾಹ್ನ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು, ಅಗ್ನಿ ಅವಘಡದಲ್ಲಿ ಇಬ್ಬರು ಸಜೀವ ದಹನವಾಗಿದ್ದಾರೆ.

ಮಾದನಾಯಕನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಅಗ್ನಿ ಅವಘಡ ಸಂಭವಿಸಿದ್ದು, ಮೃತರನ್ನು ಉತ್ತರ ಪ್ರದೇಶ ಮೂಲದ ಉದಯ್ ಭಾನು(40) ಮತ್ತು ಬಿಹಾರ ಮೂಲದ ರೋಷನ್(23) ಎಂದು ಗುರುತಿಸಲಾಗಿದೆ. ಮೃತ ಕಾರ್ಮಿಕರಲ್ಲಿ ಒಬ್ಬ ಪೇಂಟರ್, ಮತ್ತೊಬ್ಬರು ಕಾರ್ಪೆಂಟರ್ ವೃತ್ತಿ ಮಾಡುತ್ತಿದ್ದರು.

ಕಡಬಗೆರೆ ಕ್ರಾಸ್‌ನಲ್ಲಿ ಸತೀಶ್ ಎಂಬುವರು ನಾಲ್ಕು ಅಂತಸ್ತಿನ ಮನೆ ನಿರ್ಮಾಣ ಮಾಡುತ್ತಿದ್ದು, ಕೆಲ ಕಾರ್ಮಿಕರು ಈ ಕಟ್ಟಡದಲ್ಲೇ ಅಡುಗೆ ಮಾಡಿಕೊಂಡು ಅಲ್ಲೇ ವಾಸವಿರುತ್ತಾರೆ. ಇಂದು ಮಧ್ಯಾಹ್ನ ಈ ಕಟ್ಟಡದಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದೆ. ತಕ್ಷಣ ಅಕ್ಕ–ಪಕ್ಕದವರು ಅಗ್ನಿಶಾಮಕ ದಳಕ್ಕೆ ವಿಷಯ ತಿಳಿಸಿದ್ದಾರೆ. ನಾಲ್ಕು ಅಗ್ನಿಶಾಮಕ ವಾಹನಗಳೊಂದಿಗೆ ದಾವಿಸಿದ ಸಿಬ್ಬಂದಿ ಬೆಂಕಿಯನ್ನು ನಂದಿಸಿದರಾದರೂ ಅಷ್ಟರಲ್ಲಾಗಲೇ ಇಬ್ಬರು ಕಾರ್ಮಿಕರು ಸಜೀವ ದಹನವಾಗಿದ್ದು, ಮತ್ತೊಬ್ಬ ಕಾರ್ಮಿಕ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಅಡುಗೆಗೆ ಬಳಸುವ ಸಿಲಿಂಡರ್ ನಿಂದ ಅನಿಲ ಸೋರಿಕೆಯಾಗಿ ಬೆಂಕಿ ಕಾಣಿಸಿಕೊಂಡು ಅಗ್ನಿ ಅವಘಡ ಸಂಭವಿಸಿರಬಹುದೇ ಅಥವಾ ವೆಲ್ಡಿಂಗ್ ಮಾಡುವಾಗ ಬೆಂಕಿ ಕಿಡಿಯಿಂದ ಈ ಘಟನೆ ನಡೆದಿದೆಯೇ ಎಂಬ ಬಗ್ಗೆ ಮಾದನಾಯಕನಹಳ್ಳಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

ಲಂಚದ ಆರೋಪಕ್ಕಾಗಿ ಸಿಬಿಐನಿಂದ ಪಂಜರದ ಹಕ್ಕಿಯಾಗಿರುವ ಆರೋಪಿ ನ್ಯಾಕ್ ಸಮಿತಿ ಸದಸ್ಯೆ

ದಾವಣಗೆರೆ ವಿವಿ ಪ್ರಾಧ್ಯಾಪಕಿ ಡಾ. ಗಾಯತ್ರಿ ದೇವರಾಜ್ ಸೇವೆಯಿಂದ ಅಮಾನತು

ಕನ್ನಡ ಭಾರತಿ

ದಾವಣಗೆರೆ: ಲಂಚ ಪಡೆಯಲು ಹೋಗಿ ಸಿಬಿಐ ಪಂಜರದ ಹಕ್ಕಿಯಾಗಿರುವ ದಾವಣಗೆರೆ ವಿಶ್ವವಿದ್ಯಾಲಯದ ಪ್ರಾಧ್ಯಾಪಕಿ ಡಾ. ಗಾಯತ್ರಿ ದೇವರಾಜ್ ಸೇವೆಯಿಂದ ಅಮಾನತುಗೊಂಡಿದ್ದಾರೆ. ತೋಲಹುಣಸೆ ಗ್ರಾಮದಲ್ಲಿರುವ ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಗುರುವಾರ ಸಿಂಡಿಕೇಟ್ ಸದಸ್ಯರ ತುರ್ತು ಸಭೆ ಸರ್ವಾನುಮತದಿಂದ ಗಾಯತ್ರಿ ಅವರ ಅಮಾನತು ನಿರ್ಣಯ–ಕೈಗೊಂಡಿದೆ. ಸಭೆ ನಿರ್ಣಯದ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಡಿ. ಕಂಬಾರ್ ಅವರು ಅಮಾನತುಗೊಳಿಸಿದ್ದಾರೆ.

ಕನ್ನಡ ಭಾರತಿಯೊಂದಿಗೆ ಮಾತನಾಡಿದ ಕುಲಪತಿಗಳು, ಯಾವುದೇ ಮೊಕದ್ದಮೆಯಲ್ಲಿ ಬಂಧಿತರಾದ 48 ಗಂಟೆ ನಂತರ ವಿಶ್ವವಿದ್ಯಾಲಯದ ನೌಕರರನ್ನು ಅಮಾನತು ಮಾಡಲು ಅವಕಾಶವಿದೆ. ನಿಯಮಾನುಸಾರ ಹಾಗೂ ಸಿಂಡಿಕೇಟ್ ಸಭೆ ನಿರ್ಣಯದಂತೆ ಡಾ. ಗಾಯತ್ರಿ ದೇವರಾಜ್ ಅವರನ್ನು ಅಮಾನತು ಮಾಡಲಾಗಿದೆ ಎಂದರು.

ಗಾಯತ್ರಿ ಅವರನ್ನು ಬಂಧಿಸಿರುವ ಬಗ್ಗೆ ಸಿಬಿಐನಿಂದ ಯಾವುದೇ ಮಾಹಿತಿ ವಿವಿಗೆ ಬಂದಿರಲಿಲ್ಲ. ಹೀಗಾಗಿ ಅಮಾನತು ವಿಳಂಬವಾಗಿದೆ. ವಕೀಲರನ್ನು ಸಂಪರ್ಕಿಸಿ ನಂತರ ಸಿಬಿಐ ವೆಬ್‌ಸೈಟ್‌ನಲ್ಲಿ ಮಾಹಿತಿ ಪಡೆಯಲಾಯಿತು ಎಂದು ಮಾಹಿತಿ ನೀಡಿದರು.

ನ್ಯಾಕ್ ಪರಿಶೀಲನಾ ಸಮಿತಿ ಸದಸ್ಯೆ ಗಾಯತ್ರಿ ದೇವರಾಜ್ ಹಾಗೂ ಅಧ್ಯಕ್ಷ ಸೇರಿ ಹತ್ತು ಜನರನ್ನು ಬಂಧಿಸಿರುವುದಾಗಿ ಸಿಬಿಐ ಫೆ.1ರಂದು ತನ್ನ ವೆಬ್‌ಸೈಟ್‌ನಲ್ಲಿ ಮಾಧ್ಯಮ ಪ್ರಕಟಣೆ ನೀಡಿತ್ತು.

ಆಂಧ್ರಪ್ರದೇಶದ ಗುಂಟೂರಿನ ಕೆ.ಎಲ್.ಇ.ಎಫ್ ಸಂಸ್ಥೆಗೆ ನ್ಯಾಕ್ ಮಾನ್ಯತೆಗೆ ಹೆಚ್ಚು ಅಂಕ ನೀಡುವುದಕ್ಕಾಗಿ ಲಂಚ ಪಡೆಯುತ್ತಿರುವಾಗ ಹತ್ತು ಆರೋಪಿಗಳನ್ನು ಸಿಬಿಐ ಬಂಧಿಸಲಾಗಿತ್ತು.

ಏಡ್ಸ್ ರೋಗಿಗಳನ್ನು ಅಪರಾಧ ದೃಷ್ಟಿಯಿಂದ ನೋಡದೇ ಸಮಾನವಾಗಿ ಕಾಣಿರಿ : ಜಿಲ್ಲಾಧಿಕಾರಿ

ದಾವಣಗೆರೆ:ಫೆ.6– ಏಡ್ಸ್ ರೋಗಿಯನ್ನು ಅಪರಾಧಿ ದೃಷ್ಟಿಯಿಂದ ನೋಡದೇ ಸಮಾನವಾಗಿ ಕಾಣುವುದರಿಂದ ಆತ್ಮಸ್ಥೈರ್ಯ ಹೆಚ್ಚಲಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ ಹಾಗೂ ವಿವಿಧ ಇಲಾಖೆಗಳಿಂದ ಆಯೋಜಿಸಲಾಗಿದ್ದ ವಿವಿಧ ಇಲಾಖಾ ಮುಖ್ಯಸ್ಥರ ಸಮನ್ವಯ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಳೆದ ಹತ್ತು ವರ್ಷಗಳಲ್ಲಿ ಜಿಲ್ಲೆಯಲ್ಲಿ 0.5 ಎಚ್‌ಐವಿ ಸೋಂಕು ಪ್ರಕರಣಗಳು ಇಳಿಕೆಯಾಗಿದೆ. ಇದೇ ಅವಧಿಯಲ್ಲಿ ತಾಯಿಯಿಂದ ಮಗುವಿಗೆ ಎಚ್‌ಐವಿ ಸೋಂಕು ವರ್ಗವಾಗುವ ಪ್ರಮಾಣ ಕಡಿಮೆಯಾಗಿದೆ. ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಇಲಾಖೆಗಳಲ್ಲಿ ದೊರೆಯುವ ಸೌಲಭ್ಯಗಳನ್ನು ಹೆಚ್.ಐ.ವಿ ಸೋಂಕಿತರಿಗೆ ನೀಡಲು ಮತ್ತು ತಾರತಮ್ಯವಾಗದಂತೆ ಮುಂಜಾಗ್ರತೆ ಕ್ರಮವಹಿಸಬೇಕು ಎಂದರು. ಹವಾಮಾನ ಬದಲಾವಣೆ ಕುರಿತು ಮಾತನಾಡಿದ ಅವರು ಜಗಳೂರಿನಲ್ಲಿ ಬೆಂಕಿ ಅನಾಹುತಗಳು ತುಂಬಾ ಸಂಭವಿಸುತ್ತಿದ್ದು, ಇದಕ್ಕೆ ಎನ್‌ಜಿಟಿ ಗೈಡ್‌ಲೈನ್ಸ್ ಪ್ರಕಾರ ಅವರಿಗೆ ಮಾರ್ಗದರ್ಶನ ನೀಡಬೇಕು. ರಸ್ತೆಗಳಲ್ಲಿ ಹುಲ್ಲಿನ ಲಾರಿಯ ಮೇಲೆ ಬೆಂಕಿ ಅವಘಡ ಸಂಭವಿಸುತ್ತಿದೆ, ಇದನ್ನು ತಡೆಯಬೇಕು. ಪ್ಲಾಸ್ಟಿಕ್ ಬಳಕೆ ನಿಷೇಧ ಮಾಡಬೇಕು. ವಿವಿಧ ಇಲಾಖೆಗಳ ಜೊತೆಗೂಡಿ ಸಂಪೂರ್ಣವಾಗಿ ಪ್ಲಾಸ್ಟಿಕ್ ಬಳಕೆ ತಡೆಗಟ್ಟಲು ಶ್ರಮಿಸಬೇಕು ಎಂದರು. ಡಾ.ಕೃತಿ ಹೆಚ್‌ಐವಿ ನಿಯಂತ್ರಣ ಕುರಿತು ಮಾಹಿತಿ ನೀಡಿ ಹೆಚ್.ಐ.ವಿ ಆಪ್ತ ಸಮಾಲೋಚನೆ ನಡೆಸಿ ಎ.ಆರ್.ಟಿ ಔಷಧೋಪಚಾರವನ್ನು ಮಾಡಲಾಗುವುದು, ಡಾಟ್ಸ್ ಟಿ.ಬಿ.ಚಿಕಿತ್ಸೆ, ಸಿ.ಪಿ.ಟಿ ಔಷಧೋಪಾಚಾರ, ಸಮಯ ಸಾಧಕಗಳಿಗೆ, ಸೋಂಕುಗಳಿಗೆ ಚಿಕಿತ್ಸೆ, ನಿರೋಧ್, ಐ.ಇ.ಸಿ ಪೋಸ್ಟರ್ ಮತ್ತು ಕರಪತ್ರಗಳನ್ನು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಸೋಂಕಿತ, ಬಾಧಿತ, ಐಸಿಪಿಎಸ್ ಶಿಕ್ಷಣ ಸೌಲಭ್ಯಗಳನ್ನು ನೀಡಲಾಗುವುದು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ರೇಷನ್ ಕಾರ್ಡ್, ಅಂತ್ಯೋದಯ ಕಾರ್ಡ್ಗಳನ್ನು ನೀಡಲಾಗುವುದು. ಸೋಂಕಿತರಿಗೆ ಪ್ರತಿ ದಿನ ಸಮಾಲೋಚನೆ ಮಾಡುವುದರ ಜೊತೆ ಔಷಧಿ ನೀಡಿ ಜಾಗೃತಿ ಮೂಡಿಸಲಾಗುತ್ತಿದೆ ಎಂದರು. ತಾಯಿಯಿಂದ ಮಗುವಿಗೆ ಎಚ್‌ಐವಿ ಸೋಂಕು ವರ್ಗಾವಣೆಯಾಗದಂತೆ ತಡೆಯಲು ಪ್ರಮುಖ ಪಾತ್ರ ವಹಿಸುವ ನೆವರಿಪೈನ್ ಸೇರಿ ಕೆಲ ಔಷಧಿಗಳನ್ನು ನೀಡುತ್ತೇವೆ. ಶಿಶು ಜನಿಸಿದ ಬಳಿಕ ಅದರ ತೂಕದ ಅನುಸಾರ ಔಷಧಿ ನೀಡಿ, ನಿಗಾ ವಹಿಸುತ್ತೇವೆ. ನಂತರ ಹಂತ ಹಂತವಾಗಿ ಪರೀಕ್ಷೆಯನ್ನು ಮಾಡುತ್ತೇವೆ. ಐಸಿಟಿಸಿ ಕೇಂದ್ರಗಳಲ್ಲಿ ಎಚ್‌ಐವಿ ಸೋಂಕು ಪೀಡಿತರಿಗೆ ಸೂಕ್ತ ಮಾರ್ಗದರ್ಶನದ ಜೊತೆಗೆ ಔಷಧಿ ಕೊಡಲಾಗುತ್ತಿದೆ. ಯಾವುದೇ ಗೊಂದಲ, ಸಮಸ್ಯೆಗಳಿಗೆ ಆಸ್ಪದ ಮಾಡಿಕೊಡುತ್ತಿಲ್ಲ. ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಷಣ್ಮುಖಪ್ಪ, ಜಿಲ್ಲಾ ಸರ್ಜನ್ ಡಾ.ನಾಗೇಂದ್ರಪ್ಪ, ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಮುರುಳೀಧರ್, ಡಾ.ಗಂಗಾಧರ ಉಪಸ್ಥಿತರಿದ್ದರು.

ಮಕ್ಕಳ ಸುರಕ್ಷತೆಗಾಗಿ ಶಾಲಾ ವಾಹನಗಳ ಸುಸ್ಥಿತಿಯೊಂದಿಗೆ ನಿಯಮಗಳ ಪಾಲನೆ ಕಡ್ಡಾಯವಾಗಿ ಅನುಸರಿಸಲು ಡಿಸಿ ಗಂಗಾಧರಸ್ವಾಮಿ ಸೂಚನೆ

ದಾವಣಗೆರೆ: ಜಿಲ್ಲೆಯಲ್ಲಿನ ವಿವಿಧ ಶಾಲೆಗಳಿಗೆ ಕರೆದುಕೊಂಡು ಹೋಗುವ ಶಾಲಾ ವಾಹನಗಳು ಮಕ್ಕಳ ರಕ್ಷಣೆ ದೃಷ್ಟಿಯಿಂದ ಸುರಕ್ಷತಾ ಕ್ರಮ ಅನುಸರಿಸುವುದು ಅನಿವಾರ್ಯವಾಗಿದ್ದು ಪಾಲನೆ ಮಾಡದ ಶಾಲಾ ಸಂಸ್ಥೆಗಳ ಮೇಲೆ ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ.ಸೂಚನೆ ನೀಡಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ತುಂಗಭದ್ರಾ ಸಭಾಂಗಣದಲ್ಲಿ ಖಾಸಗಿ ಶಾಲಾ ಆಡಳಿತ ಮಂಡಳಿ, ಶಿಕ್ಷಣ ಇಲಾಖೆ, ಸಾರಿಗೆ, ಮಕ

ಇಂದಿನ ರಾಶಿ ಭವಿಷ್ಯ

ಮೇಷ ರಾಶಿ

ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು. ಇದು ನಿಮ್ಮ ಹಣಕಾಸಿನ ಸ್ಥಿತಿಯನ್ನು ಹದಗೆಡಿಸುತ್ತದೆ ಆದರೆ ಸಂಬಂಧವನ್ನು ಬಲಪಡಿಸುತ್ತದೆ. ನಿಮ್ಮ ಸಮಸ್ಯೆಗಳನ್ನು ಮರೆತು ಕುಟುಂಬದ ಸದಸ್ಯರೊಂದಿಗೆ ಒಳ್ಳೆಯ ಸಮಯ ಕಳೆಯುತ್ತೀರಿ.

ವೃಷಭ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ, ಆದರೆ ಕೆಲವು ಅಮೂಲ್ಯ ವಸ್ತುವಿನ ಕಳ್ಳತನದಿಂದಾಗಿ, ನಿಮ್ಮ ಮನಸ್ಥಿತಿಗೆ ತೊಂದರೆಯಾಗಬಹುದು. ಇಂದು ಹಣದ ಬಗ್ಗೆ ಕುಟುಂಬ ಸದಸ್ಯರಲ್ಲಿ ಗೊಂದಲ ಉಂಟಾಗಬಹುದು. ಹಣಕಾಸಿನ ವಿಷಯದ ಬಗ್ಗೆ ನೀವು ಕುಟುಂಬದ ಎಲ್ಲ ಸದಸ್ಯರಿಗೆ ಸ್ಪಷ್ಟವಾಗಿರಲು ಸಲಹೆ ನೀಡಬೇಕು.

ಮಿಥುನ ರಾಶಿ

ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯಿದ್ದಾಗಲೇ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ನೀವು ಮನೆಯಿಂದ ಹೊರ ಇದ್ದು ಉದ್ಯೋಗ ಅಥವಾ ಅಧ್ಯಯನ ಮಾಡುತ್ತಿದ್ದರೆ, ನಿಮ್ಮ ಹಣ ಮತ್ತು ಸಮಯವನ್ನು ವ್ಯರ್ಥ ಮಾಡುವಂತಹ ಜನರಿಂದ ದೂರವಿರುವುದು ಕಲಿತುಕೊಳ್ಳಬೇಕು. ನಿಮ್ಮ ಸಂಗಾತಿಯ ಜೊತೆಗಿನ ಸಂಬಂಧ ನಿಮ್ಮ ಕಚೇರಿ ಕೆಲಸದ ಕಾರಣ ಹಾಳಾಗಬಹುದು. ಇಂದು ಪ್ರಣಯದ ಭಾವನೆಗಳಿಗೆ ಪ್ರತಿಕ್ರಿಯೆ ದೊರಕುತ್ತದೆ.

ಕರ್ಕ ರಾಶಿ

ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್ ಗಳ ಬಗ್ಗೆ ಎಚ್ಚರಿಕೆಯಿಂದಿರಿ. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ. ಅದರೆ ಹಾಗೆ ಮಾಡಿದಲ್ಲಿ ನೀವು ವಿಷಾದಿಸುತ್ತೀರಿ. ಗೃಹ ಜೀವನ ಶಾಂತಿಯುತ ಮತ್ತು ಉತ್ತಮವಾಗಿರುತ್ತದೆ ಹೊಸ ಪ್ರೀತಿಯ ಸಂಪರ್ಕವನ್ನು ಹೊಂದುವ ಅವಕಾಶಗಳು ಬಲವಾಗಿದ್ದರೂ ವೈಯಕ್ತಿಕವಾದ ಮತ್ತು ಗೌಪ್ಯವಾದ ಮಾಹಿತಿಯನ್ನು ಬಹಿರಂಗಪಡಿಸಬೇಡಿ. ನಿಮ್ಮ ಕೆಲಸಕ್ಕೆ ಮೆಚ್ಚುಗೆ ದೊರಕಲಿದೆ.

ಸಿಂಹ ರಾಶಿ

ಉತ್ತಮ ಆರೋಗ್ಯ ಏನಾದರೂ ಅಸಾಮಾನ್ಯವಾಗಿದ್ದನ್ನು ಸಾಧಿಸಲು ಸಾಧ್ಯವಾಗಿಸುವ ಒಂದು ವಿಶೇಷ ದಿನ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ನಿಮ್ಮ ಜೀವನದಲ್ಲಿ ಒಂದು ಭವ್ಯವಾದ ಲಯವನ್ನು ರೂಪಿಸಿಕೊಳ್ಳಿ ಮತ್ತು ಶರಣಾಗತಿಯ ಮತ್ತು ಹೃದಯದಲ್ಲಿ ಪ್ರೀತಿಯ ಜೊತೆ ನೇರವಾಗಿ ಮತ್ತು ಕೃತಜ್ಞತೆಯಿಂದ ನಡೆಯುವ ಕಲೆಯ ಮೌಲ್ಯಗಳನ್ನು ತಿಳಿದುಕೊಳ್ಳಿ. ಇದು ನಿಮ್ಮ ಕೌಟುಂಬಿಕ ಜೀವನವನ್ನು ಹೆಚ್ಚು ಅರ್ಥಪೂರ್ಣವಾಗಿಸುತ್ತದೆ.

ಕನ್ಯಾ ರಾಶಿ

ನಿಮ್ಮಲ್ಲಿ ಕೆಲವರು ಇದು ಇಂದು ಬಲವಂತವಾಗಿ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಬೇಕಾಗಬಹುದು ಹಾಗೂ ಇದು ನಿಮ್ಮನ್ನು ಉದ್ವೇಗಭರಿತರನ್ನಾಗಿಯೂ ಹಾಗೂ ಗಾಬರಿಯಿರುವವರನ್ನಾಗಿಯೂ ಮಾಡಬಹುದು. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ಒಂದು ಕುಟುಂಬದ ಒಟ್ಟಾಗುವಿಕೆಯಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ.

ತುಲಾ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ವಿಷಾದಿಸಬೇಕಾಗುತ್ತದೆ. ಇಂದು ನೀವು ಮನೆಯಲ್ಲಿ ಸೂಕ್ಷ್ಮ ಸಮಸ್ಯೆಯನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ ಮತ್ತು ಪ್ರಭಾವವನ್ನು ಬಳಸಬೇಕಾಗುತ್ತದೆ.

ವೃಶ್ಚಿಕ ರಾಶಿ

ನಿಮ್ಮ ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ ಮತ್ತು ಫಿಟ್ ಆಗಿ ಉಳಿಯಲು ವ್ಯಾಯಾಮ ಮಾಡಿ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ನಿಮಗೆ ಗೊತ್ತಿದ್ದ ಯಾರಾದರೂ ಹಣಕಾಸಿಗೆ ಸಂಬಂಧಿಸಿದ ವಿಷಯಗಳಿಗೆ ಅತಿಯಾಗಿ ಪ್ರತಿಕ್ರಿಯಿಸಬಹುದು, ಇದು ಮನೆಯಲ್ಲಿ ಆತಂಕದ ಕ್ಷಣಗಳು ತರುತ್ತದೆ. ಸಮಯ, ಕೆಲಸ, ಹಣ, ಸ್ನೇಹಿತರು, ಕುಟುಂಬ, ಬಂಧುಗಳು; ಎಲ್ಲವೂ ಒಂದು ಕಡೆ ಮತ್ತು ನಿಮ್ಮ ಸಂಗಾತಿಯ ಜೊತೆ ನೀವು ಇನ್ನೊಂದು ಕಡೆಗಿರುತ್ತೀರಿ.

ಧನು ರಾಶಿ

ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು. ಇದಕ್ಕಾಗಿ ನೀವು ನಿಮ್ಮ ಯಾವುದೇ ವಿಶ್ವಾಸಾರ್ಹರಿಂದ ಸಲಹೆಯನ್ನು ತೆಗೆದುಕೊಳ್ಳಬೇಕು. ಸ್ನೇಹಿತರು ನಿಮಗೆ ಬೆಂಬಲ ನೀಡಿದರೂ –ಆದರೆ ಮಾತುಗಳ ಬಗ್ಗೆ ಎಚ್ಚರದಿಂದಿರಿ ಪ್ರೀತಿಪಾತ್ರರಲ್ಲದೇ ನಿಮ್ಮ ಸಮಯ ಕೊಲ್ಲುವುದು ಕಷ್ಟ.

ಮಕರ ರಾಶಿ

ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ.

ಕುಂಭ ರಾಶಿ

ನೀವು ಪರಿಸ್ಥಿತಿಯ ನಿಯಂತ್ರಣ ಹೊಂದುತ್ತಿದ್ದಂತೆ ನಿಮ್ಮ ಆತಂಕ ಕಣ್ಮರೆಯಾಗುತ್ತದೆ. ಇದು ಧೈರ್ಯದ ಮೊದಲ ಸ್ಪರ್ಶದಲ್ಲಿ ಕುಸಿದುಹೋಗುವ ಸಾಬೂನಿನ ಗುಳ್ಳೆಯಷ್ಟೇ ಗಟ್ಟಿಯೆಂದು ನೀವು ಅರ್ಥ ಮಾಡಿಕೊಳ್ಳುತ್ತೀರಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ಮನೆಯಲ್ಲಿ ಧರ್ಮಕಾರ್ಯಗಳನ್ನು ನಡೆಸಲಾಗುವುದು. ನಿಮ್ಮ ಗೆಳತಿ ನಿಮಗೆ ಮೋಸ ಮಾಡಬಹುದು.

ಮೀನ ರಾಶಿ

ತುಂಬಾ ಚಿಂತೆ ಮತ್ತು ಒತ್ತಡ ನಿಮ್ಮ ಆರೋಗ್ಯವನ್ನು ನಾಶಮಾಡಬಹುದು. ನೀವು ಮಾನಸಿಕ ಸ್ಪಷ್ಟತೆಯನ್ನು ಕಾಯ್ದುಕೊಳ್ಳಲು ಗೊಂದಲ ಮತ್ತು ಹತಾಶೆಯನ್ನು ತಡೆಗಟ್ಟಬೇಕು. ಕೆಲವರಿಗೆ ಪ್ರಯಾಣದ ಗಡಿಬಿಡಿ ಮತ್ತು ಒತ್ತಡದಿಂದ ಕೂಡಿರುತ್ತವೆ – ಆದರೆ ಆರ್ಥಿಕವಾಗಿ ಲಾಭದಾಯಕವಾಗಿರುತ್ತವೆ. ನಿಮ್ಮ ಕುಟುಂಬದ ಸದಸ್ಯರ ಭಾವನೆಗಳನ್ನು ನೋಯಿಸುವುದನ್ನು ತಪ್ಪಿಸುವ ಮೂಲಕ ನಿಮ್ಮ ಕೋಪವನ್ನುನಿಯಂತ್ರಿಸಿ.

ಜೇನು ಸಾಕಾಣಿಕೆ ತಂತ್ರಜ್ಞಾನದಿಂದ ರೈತರ ಸಬಲೀಕರಣ : ಡಾ.ಆರ್.ಸಿ.ಜಗದೀಶ

ಶಿವಮೊಗ್ಗ: ಜೇನು ಸಾಕಾಣಿಕೆ ತಂತ್ರಜ್ಞಾನದಿಂದ ರೈತರ ಸಬಲೀಕರಣ ಸಾಧ್ಯವಾಗಿದ್ದು ಜೇನು ಸಾಕಾಣಿಕೆ ತರಬೇತಿಯ ಸದುಪಯೋಗವನ್ನು ರೈತರು ಪಡೆಯಬೇಕೆಂದು

ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಆರ್. ಸಿ. ಜಗದೀಶ ಹೇಳಿದರು.

ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಇರುವಕ್ಕಿ, ಶಿವಮೊಗ್ಗ, ಪಿ.ಎಂ.ಇ. ಘಟಕ, ರೈತ ತರಬೇತಿ ಸಂಸ್ಥೆ ಹಾಗೂ ತಾಲ್ಲೂಕು ಪಂಚಾಯತಿ, ಹೊಸನಗರ ಇವರ ಸಂಯುಕ್ತ ಆಶ್ರಯದಲ್ಲಿ ಐ.ಸಿ.ಎ.ಆರ್. ಟಿ.ಎಸ್.ಪಿ. ಯೋಜನೆ ?ಕರ್ನಾಟಕದ ಶಿವಮೊಗ್ಗ ಜಿಲ್ಲೆಯಲ್ಲಿ ಜೇನುಸಾಕಾಣೆ ಯತಂತ್ರಗಳೊಂದಿಗೆ ಪರಿಶಿಷ್ಟ ಪಂಗಡಗಳ ಸಬಲೀಕರಣ? ಅಡಿಯಲ್ಲಿ ದಿನಾಂಕ : 01–02–2025 ರಿಂದ 03–02–2025ರ ವರೆಗೆ ವಿಶ್ವವಿದ್ಯಾಲಯದ ಶರಾವತಿ ಆಡಳಿತ ಭವನದಲ್ಲಿ ಪರಿಶಿಷ್ಟ ಪಂಗಡದ ರೈತರಿಗೆ ಏರ್ಪಡಿಸಲಾಗಿರುವ ?ಜೇನು ಸಾಕಾಣಿಕೆ ತರಬೇತಿ?ಯ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರೈತರಿಗೆ ಮುಕ್ತವಾಗಿರುವ ಈ ವಿಶ್ವವಿದ್ಯಾಲಯದಲ್ಲಿ ನಡೆಯುವ ಹಲವಾರು ತರಬೇತಿಗಳಲ್ಲಿ ರೈತರು ಭಾಗವಹಿಸಬೇಕೆಂದು ಕರೆ ನೀಡಿದರು. ಶಿಬಿರಾರ್ಥಿಗಳಿಗೆ ಜೇನುಸಾಕಣೆಯನ್ನು ಆಸಕ್ತಿಯಿಂದ ಮಾಡಲು ಸಲಹೆ ನೀಡಿ, ಹೆಚ್ಚು ಹೆಚ್ಚು ಜೇನುತುಪ್ಪ ಉತ್ಪಾದಿಸಲು ಸಲಹೆ ನೀಡಿದರು ಹಾಗೂ ಉತ್ಪಾದಿಸಿದ ಹೆಚ್ಚುವರಿ ಜೇನುತುಪ್ಪವನ್ನು ವಿಶ್ವವಿದ್ಯಾಲಯವೇ ಖರೀದಿಸುವುದಾಗಿ ಭರವಸೆ ನೀಡಿದರು. ಶಿಬಿರಾರ್ಥಿಗಳಿಗೆ ತರಬೇತಿ ಪ್ರಮಾಣ ಪತ್ರದೊಂದಿಗೆ ಜೇನುಸಾಕಾಣಿಕೆಗೆ ಬೇಕಾದ ಪರಿಕರಗಳನ್ನುವಿ ತರಣೆಮಾಡಿದರು.

ಮುಖ್ಯಅಥಿತಿಗಳಾದ ಸಂಶೋಧನಾ ನಿರ್ದೇಶಕ ಡಾ. ಬಿ. ಎಂ. ದುಷ್ಯಂತಕುಮಾರ್ ಮಾತನಾಡಿ, ಸ್ವಾವಲಂಬಿ ಜೀವನಕ್ಕೆ ದಾರಿಯಾಗಿರುವ ಈ ತರಬೇತಿಯ ಸಂಪೂರ್ಣ ಪ್ರಯೋಜನವನ್ನು ಶಿಬಿರಾರ್ಥಿಗಳು ಪಡೆದುಕೊಳ್ಳಬೇಕೆಂದು ಹಾರೈಸಿದರು.

ವಿದ್ಯಾರ್ಥಿ ಕಲ್ಯಾಣ ನಿರ್ದೇಶಕ ಡಾ. ನಾರಾಯಣಎಸ್. ಮಾವರಕರ್, ಶಿಬಿರಾರ್ಥಿಗಳಿಗೆ ಶುಭ ಹಾರೈಸಿದರು. ನೋಡಲ್ ಅಧಿಕಾರಿ ಹಾಗೂ ಪ್ರಧಾನ ಪರಿಶೋಧಕರಾದ ಡಾ.ಜಯಲಕ್ಷ್ಮೀ ನಾರಾಯಣ

ಹೆಗಡೆ, ಮೂರು ದಿನಗಳ ಕಾಲ ನಡೆದ ತರಬೇತಿಯ ಕುರಿತುವಿವರಣೆ ನೀಡಿದರು. ಸಹಾಯಕ ಪ್ರಾಧ್ಯಾಪಕ (ಕೃಷಿಕೀಟಶಾಸ್ತ್ರ) ಡಾ. ಕೃಷ್ಣ ರೆಡ್ಡಿ ಪಿ., ಇವರು ಕಾರ್ಯಕ್ರಮವನ್ನು ನಿರೂಪಿಸಿದರು. ಕಾರ್ಯಕ್ರಮದಲ್ಲಿ ಶ್ರೀವಿಘ್ನೇಶ ತಲಕಾಲಕೊಪ್ಪ, ಡಾ. ದರ್ಶನ್ ಆರ್, ಶ್ರೀಸುಧೀರ್, ಶ್ರೀಮನೋಹರ ಉಪಸ್ಥಿತರಿದ್ದರು. ಶಿವಮೊಗ್ಗ ಜಿಲ್ಲೆಯ ಸುತ್ತಮುತ್ತಲಿನ ಹಳ್ಳಿಯ ಪರಿಶಿಷ್ಟ ಪಂಗಡಗಳ 30 ರೈತ ಮಹಿಳೆಯರು/ರೈತರು/ಯುವಕ/ಯುವತಿಯರು ಈ ತರಬೇತಿಯಲ್ಲಿಭಾಗವಹಿಸಿದ್ದರು.

ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪ್ರಾಯೋಗಿಕ ಕಲಿಕೆ ಕಾರ್ಯಕ್ರಮ

ಶಿವಮೊಗ್ಗ: ಭಾರತ ಸರ್ಕಾರ, ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ, ಮೈಭಾರತ್, ಮಹಾನಗರ ಪಾಲಿಕೆಜಿಲ್ಲಾ ನಗರಾಭಿವೃದ್ಧಿ ಕೋಶ, ನೆಹರು ಯುವ ಕೇಂದ್ರ ಹಾಗೂ ಸಹ್ಯಾದ್ರಿ ಕಲಾ ಕಾಲೇಜು, ಸಮಾಜಕಾರ್ಯ ವಿಭಾಗ ಶಿವಮೊಗ್ಗ ಇವರ ಸಂಯುಕ್ತ ಆಶ್ರಯದಲ್ಲಿ ಪಾಲಿಕೆಯಲ್ಲಿ ಹಮ್ಮಿಕೊಳ್ಳಲಾಗಿರುವ ಸಮುದಾಯಕ್ಕೆ ಪ್ರಾಮುಖ್ಯತೆಯಿರುವ ಅನೇಕ ಕ್ಷೇತ್ರಗಳಲ್ಲಿ ಯುವಜನರಿಗೆ ಸ್ವಯಂಸೇವಕ ಅವಕಾಶಗಳಿಗಾಗಿ 15 ದಿನಗಳ ಕಾಲ ಶಿವಮೊಗ್ಗ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪ್ರಾಯೋಗಿಕ ಕಲಿಕೆ ಕಾರ್ಯಕ್ರಮಕ್ಕೆ ಪಾಲಿಕೆಯ ಆಯುಕ್ತರಾದ ಡಾ.ಕವಿತ ಯೋಗಪ್ಪನವರ್ ಮತ್ತು ಜಿಲ್ಲಾ ನಗರಾಭಿವೃದ್ಧಿ ಕೋಶದ ಕಾರ್ಯಕ್ರಮ ನಿರ್ದೇಶಕರಾದ ರಂಗಸ್ವಾಮಿ.ಕೆ ರವರು ಯುವಜನರಿಗೆ ಮೈಭಾರತ್ ಕಿಟ್‌ನ್ನು ನೀಡುವುದರ ಮೂಲಕ ಚಾಲನೆ ನೀಡಿದರು. ಇಂದು ಕಲಿಕೆ ಕಾರ್ಯಕ್ರದಲ್ಲಿ ನಗರಾಭಿವೃದ್ಧಿ ಕೋಶದ ಪ್ರಸಾದ್ ಮಾತನಾಡಿ, ಪುರಸಭೆಯ ಆಡಳಿತ ಕಾರ್ಯಗಳಾದ ಪುರಸಭೆಗಳ ರಚನೆ, ಅದರ ಪಾತ್ರಗಳು ಮತ್ತು ಜವಾಬ್ದಾರಿಗಳು, ಕೌನ್ಸಿಲ್ ಸಂಸ್ಥೆಗಳು, ಆರ್.ಟಿ.ಐ ಬಗ್ಗೆ ಸಂಬಂಧಿಸಿದ ಮಾಹಿತಿಗಳನ್ನು ವಿವರವಾಗಿ ತಿಳಿಸಿದರು. ಪ್ರಾಯೋಗಿಕ ಕಲಿಕೆ ಕಾರ್ಯಕ್ರಮದ ಮುಂದಿನ ದಿನಗಳಲ್ಲಿ ಯುವ ಜನರಿಗೆ ವಿವಿಧ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಆದಾಯ ತೆರಿಗೆ ಇಲಾಖೆಗೆ ಸಂಬಂಧಿಸಿದ ಅಂಶಗಳಾದ ಖಾತಾ ಸಂಬಂಧಿತ, ತೆರಿಗೆ, ಅನುಮತಿ ಮತ್ತು ಕಾರ್ಯವಿಧಾನ, ನೀರಿನ ನಿರ್ವಹಣೆ, ಘನ ತ್ಯಾಜ್ಯ ನಿರ್ವಹಣೆ, ಕಲ್ಯಾಣ ಯೋಜನೆಗಳು ಮತ್ತು ಕಾರ್ಯಕ್ರಮಗಳು ವಸತಿ ಯೋಜನೆಗಳು ಮತ್ತು ಕಾರ್ಯಕ್ರಮಗಳು, ಲೆಕ್ಕ ಪರಿಶೋಧನೆಗೆ ಸಂಬಂಧಿಸಿದ ಮಾಹಿತಿಗಳು, ಜಿಎಸ್‌ಟಿ ಮುಂತಾದ ವಿಷಯಗಳ ಬಗ್ಗೆ, ಮಾಹಿತಿ ತಂತ್ರಜ್ಞಾನದ ಬಗ್ಗೆ ಇನ್ನು ಹಲವಾರು ವಿಷಯಗಳ ಕುರಿತಾದ ಮಾಹಿತಿ ನೀಡಲಾಗುವುದು ಎಂದರು.

ನೆಹರು ಯುವ ಕೇಂದ್ರದ ಯುವ ಅಧಿಕಾರಿ ಉಲ್ಲಾಸ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಐ.ಟಿ ನೋಡಲ್ ಅಧಿಕಾರಿ ಸುದೀಪ್ ಹಾಗೂ ಸಹ್ಯಾದ್ರಿ ಕಲಾ ಕಾಲೇಜಿನ ಉಪನ್ಯಾಸಕರಾದ ಗೌರಿಶಂಕರ್ ರವರು ಉಪಸ್ಥಿತರಿದ್ದರು.

ಮಾನವ ಕಳ್ಳ ಸಾಗಣಿಕೆಯ ಮಜಲುಗಳ ಅರಿವು ಕಾರ್ಯಗಾರ

ಚಿಕ್ಕಮಗಳೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಚಿಕ್ಕಮಗಳೂರು ಹಾಗೂ ಪರಿವರ್ತನ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಶಿರಾಳಕೊಪ್ಪ ಇವರ ಸಂಯುಕ್ತಾಶ್ರಯದಲ್ಲಿ ಫೆಬ್ರವರಿ 06 ರಂದು ಬೆಳಿಗ್ಗೆ 10.00 ಗಂಟೆಗೆ ನಗರದ ತಾಲ್ಲೂಕು ಪಂಚಾಯಿತಿ ಡಾ. ಅಂಬೇಡ್ಕರ್ ಸಭಾಂಗಣದಲ್ಲಿ ಮಾನವ ಕಳ್ಳ ಸಾಗಣಿಕೆಯ ಮಜಲುಗಳ ಅರಿವು ಕುರಿತು ಒಂದು ದಿನದ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದೆ.

ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ವಿ. ಹನುಮಂತಪ್ಪ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಹೆಚ್.ಎಸ್. ಕೀರ್ತನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಮಹಾಂತೇಶ್ ಭಜಂತ್ರಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟರಾಜು, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಮಾಲತಿ ಬಿ., ಕಾರ್ಮಿಕ ಇಲಾಖೆ ಕಾರ್ಮಿಕ ಅಧಿಕಾರಿ ಸುರೇಶ್ ಬಿ.ಸಿ., ಪರಿವರ್ತನಾ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ನಿರ್ದೇಶಕ, ಶಿರಾಳಕೊಪ್ಪ ಮತ್ತು ಬೆಂಗಳೂರು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಸದಸ್ಯರು ಶಂಕರಪ್ಪ ಡಿ., ಮೈಸೂರು ಒಡನಾಡಿ ಸೇವಾ ಸಂಸ್ಥೆ ನಿರ್ದೇಶಕ ಮತ್ತು ಬೆಂಗಳೂರು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಸದಸ್ಯರು ಪರಶುರಾಮ್ ಎಂ.ಎಲ್. ಮುಂತಾದವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಸವಿತ ಮಹರ್ಷಿ ಕೇಶ ಶೃಂಗಾರ, ಲಲಿತ ಕಲೆ, ಸಾಹಿತ್ಯದಲ್ಲಿಯೂ ಪ್ರಸಿದ್ಧರು



ಹಾಸನ : ಸವಿತ ಮಹರ್ಷಿಯವರು ಕೇಶ ಶೃಂಗಾರ ಮಾಡುವುದರ ಜೊತೆಗೆ ಲಲಿತ ಕಲೆ, ಸಾಹಿತ್ಯದಲ್ಲಿಯೂ ಕೂಡ ಪ್ರಸಿದ್ಧರಾಗಿದ್ದರು, ಅವರ ತತ್ವಗಳನ್ನು ಅಳವಡಿಸಿಕೊಂಡು ಸನ್ಮಾರ್ಗಿಗಳಾಗಬೇಕು ಎಂದು ಜಿಲ್ಲಾ ಭಜಂತ್ರಿ ಸಂಘದ ಕಾರ್ಯದರ್ಶಿಗಳಾದ ಷಣ್ಮುಗಂ ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಹಾಸ

ರಸ್ತೆ ಅಪಘಾತ: ಬೈಕ್ ಸವಾರ ಸಾವು

ಶಿವಮೊಗ್ಗ: ಇಲ್ಲಿನ ಏರ್ ಪೋರ್ಟ್ ರಸ್ತೆಯಲ್ಲಿ ನಡೆದ ರಸ್ತೆ ಅಪಘಾತದಲ್ಲಿ ಬೈಕ್ ಸವಾರ ಸಾವು ಕಂಡಿದ್ದಾನೆ. ನಗರದ ಪುಟ್ಟಪ್ಪನ ಕ್ಯಾಂಪ್‌ನಲ್ಲಿರುವ ಪ್ರತಿಷ್ಠಿತ ರೆಸಾರ್ಟ್‌ನಲ್ಲಿ ಮದುವೆ ಕಾರ್ಯಕ್ರಮ ಮುಗಿಸಿಕೊಡು ವಾಪಾಸ್ ಭದ್ರಾವತಿಯ ಹುಣ್ಣೆಕಟ್ಟೆ ಜಂಕ್ಷನ್ ನಲ್ಲಿರುವ ಮನೆಗೆ ಬೈಕ್ ನಲ್ಲಿ ಹೋಗುವಾಗ ಏರ್‌ಪೋರ್ಟ್ ಗೇಟ್ ಬಳಿ ಡಿವೈಡರ್‌ಗೆ ಡಿಕ್ಕಿ ಹೊಡೆದು ಯುವಕ ಸಾವನ್ನಪ್ಪಿದ್ದಾನೆ. ಮೃತನನ್ನು ನಿಶ್ಚಿತ್ (20) ಎಂದು ಗುರುತಿಸಲಾಗಿದೆ. ಪೇಂಟ್ ಕೆಲಸ ಮಾಡಿ ಕೊಂಡಿದ್ದ ನಿಶ್ಚಿತ್ ರೆಸಾರ್ಟ್‌ನಲ್ಲಿ ನಡೆಯುತ್ತಿದ್ದ ಮದುವೆ ಕಾರ್ಯಕ್ರಮಕ್ಕೆ ಬಂದು ಊಟ ಮುಗಿಸಿಕೊಂಡು ವಾಪಾಸ್ ಜಂಕ್ಷನ್‌ಗೆ ಬೈಕ್‌ನಲ್ಲಿ ಹೋಗುವಾಗ ಈ ದುರ್ಘಟನೆ ಸಂಭವಿಸಿದೆ. ಮುಖ್ಯವಾಗಿ ಬೈಕ್‌ನಲ್ಲಿ ಹೋಗುವಾಗ ನಿಶ್ಚಿತ್ ಹೆಲ್ಮೆಟ್ ಧರಿಸದ ಕಾರಣ ಈ ದುರ್ಘಟನೆ ನಡೆದಿದೆ ಎಂದು ಸ್ಥಳೀಯರು ತಿಳಿಸಿ ದ್ದಾರೆ. ತುಂಗನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಸತ್ಯನಾರಾಯಣ ಸ್ವಾಮಿಯ 44ನೇ ವಾರ್ಷಿಕೋತ್ಸವ

ಸೊರಬ: ತಾಲ್ಲೂಕು ದೈವಜ್ಞ ಬ್ರಾಹ್ಮಣ ಸಮಾಜ ಹಾಗೂ ಶ್ರೀ ಸತ್ಯನಾರಾ ಯಣ ಸ್ವಾಮಿ ಸೇವಾ ಸಮಿತಿ ವತಿಯಿಂದ ಪಟ್ಟಣದ ಚಿಕ್ಕಪೇಟೆಯ ಲ್ಲಿರುವ ಶ್ರೀ ಸತ್ಯನಾರಾಯಣ ಸ್ವಾಮಿಯ 44ನೇ ವಾರ್ಷಿಕೋತ್ಸವ ಹಾಗೂ ಶ್ರೀ ಸತ್ಯನಾರಾಯಣ ಸ್ವಾಮಿಯ ಪಲ್ಲಕ್ಕಿ ಉತ್ಸವ ಫೆ.4ರ ಮಂಗ ಳವಾರ ನಡೆಯಲಿದೆ.ಬೆಳಿಗ್ಗೆ 6 ಗಂಟೆಗೆ ಶ್ರೀ ಗಣಪತಿ ಪೂಜೆ, ಪೂರ್ಣಾಹ, ಪಂಚಗವ್ಯ ಹವನ, ಕಲಾವೃದ್ಧಿ ಹವನ, ಪಂಚಾಮೃತ ಅಭಿಷೇಕ, ಅಷ್ಟೋತ್ತರ ಸಹಿತ ತುಳಸಿ ಅರ್ಚನೆ ಮತ್ತು ಶ್ರೀ ಸತ್ಯನಾರಾಯಣ ಸ್ವಾಮಿಯ ವ್ರತ ಪೂಜೆ ಹಾಗೂ ಸ್ವಾಮಿಯ ಪಲ್ಲಕ್ಕಿ ಉತ್ಸವ ನಂತರ ಮಧ್ಯಾಹ್ನ ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ಹಾಗೂ ಸಾರ್ವಜನಿಕ ಅನ್ನಸಂತರ್ಪಣೆ ನಡೆಯಲಿದ್ದು, ಭಕ್ತಾದಿಗಳು ಪಾಲ್ಗೊಳ್ಳುವಂತೆ ಪ್ರಸನ್ನಕುಮಾರ್ ದೊಡ್ಡ ಮನೆ ಕೋರಿದ್ದಾರೆ.

ಆರ್ಥಿಕ ಪ್ರಗತಿಯ ಬಜೆಟ್

ಚಿಕ್ಕಮಗಳೂರು: ಕೇಂದ್ರ ಸರ್ಕಾರ ಪ್ರಸಕ್ತ ಸಾಲಿನಲ್ಲಿ ಮಂಡಿಸಿರುವ ಬಜೆಟ್ ರೈತರು, ಯುವ ಸಮೂಹ, ಹಿರಿಯ ನಾಗರಿಕರು ಹಾಗೂ ದೇಶದ ಆರ್ಥಿಕ ಪ್ರಗತಿಯತ್ತ ಕೊಂಡೊಯ್ಯುವ ಉತ್ತಮ ಬಜೆಟ್ ಎಂದು ಕಡವಂತಿ ಗ್ರಾ.ಪಂ. ಸದಸ್ಯ ವಿನೋದ್ ಹೇಳಿದ್ದಾರೆ.ಕೇಂದ್ರ ಸಚಿವೆ ನಿರ್ಮಲ ಸೀತಾರಾಮ ಅವರ ಬಜೆಟ್ ಪ್ರಾಥಮಿಕ ಶಾಲೆಗಳಿಗೆ ಬ್ರಾಡ್ ಬ್ಯಾಂಡ್, ರಾಜ್ಯಗಳಿಗೆ ಬಡ್ಡಿ ರಹಿತ ಸಾಲ, ಕಿಶನ್ ಕ್ರೆಡಿಟ್ ಕಾರ್ಡ್ ಸಾಲದ ಮಿತಿ 3 ಲಕ್ಷದಿಂದ 5 ಲಕ್ಷಕ್ಕೆ ಏರಿಕೆ, ಹೊಸ ಆದಾಯ ತೆರಿಗೆ ಬಿಲ್, 120 ಸ್ಥಳಗಳಿಗೆ ವಿಮಾನ, ಡೆಲಿವರಿ ಬಾಯ್ಸ್ ಗಳಿಗೆ ಪೋರ್ಟಲ್, ಕ್ಯಾನ್ಸರ್ ಔಷಧಿಗಳ ದರ ಇಳಿಕೆ, ಅಸ್ಸಾಮಿನಲ್ಲಿ ಯೂರಿಯಾ ಪ್ಲಾಂಟ್ ಆರಂಭ, ತೆರಿಗೆ ಇಳಿಸಿದ ಪರಿಣಾಮ ದೇಶಿ ನಿರ್ಮಿತ ಬಟ್ಟೆ ಮೇಡ್ ಇನ್ ಇಂಡಿಯಾ ಲಿಥಿಯನ್, ಬ್ಯಾಟರಿ ದರ ಇಳಿಕೆಯಾಗಿವೆ ಎಂದಿದ್ದಾರೆ. ರೈತರ ಪರವಾಗಿ, ಸಣ್ಣ ದೊಡ್ಡ ಉದ್ಯಮಿಗಳ ಪರವಾಗಿ, ಶಿಕ್ಷಣದ ಪರವಾಗಿ, ಆ ರೋಗ್ಯದ ಪರವಾಗಿ ಎಲ್ಲಾ ಕ್ಷೇತ್ರಕ್ಕೂ ಬಜೆಟ್ಟನ್ನು ಮಂಡಿಸಿ ದೇಶದ ಜನತೆಗೆ, ಅಭಿವೃದ್ಧಿಗೆ ಉತ್ತಮವಾದ ಬಜೆಟ್ ಎಂದು ಹೇಳಿದ್ದಾರೆ.

ವಿದ್ಯುತ್ ಲೈನ್ ಅಳವಡಿಕೆ ಗಲಾಟೆ: ಕೊಲೆಯಲ್ಲಿ ಅಂತ್ಯ

ಚಿಕ್ಕಮಗಳೂರು: ಬೋರ್‌ವೆಲ್‌ಗೆ ವಿದ್ಯುತ್ ಲೈನ್ ಅಳವಡಿಕೆ ವಿಚಾರಕ್ಕೆ ಗಲಾಟೆ ನಡೆದು ಪ್ರಕರಣ ಕೊಲೆಯಲ್ಲಿ ಅಂತ್ಯ ಕಂಡಿದೆ. ಕಡೂರು ತಾಲ್ಲೂಕಿನ ವಡೇರ ಹಳ್ಳಿ ಗ್ರಾಮದಲ್ಲಿ ಘಟನೆ ನಡೆದಿದ್ದು ಕಲ್ಲೇಶಪ್ಪ (55) ಮೃತ ದುರ್ದೈವಿ. ವಡೇ ರಹಳ್ಳಿ ಪಕ್ಕದ ಆನಂದಪುರ ಗ್ರಾಮದ ಮೂವರ ಮೇಲೆ ದೂರು ನೀಡಲಾಗಿದೆ. ಟಿಸಿಯಿಂದ ವಿದ್ಯುತ್ ಲೈನ್ ಎಳೆದುಕೊಂಡು ಬೋರ್ ಮೂಲಕ ತೋಟಕ್ಕೆ ನೀರು ಹಾಯಿಸಿದ್ದು ಅದೇ ಟಿಸಿಯಿಂದ ಮತ್ತೊಂದು ಬೋರ್‌ಗೆ ಕರೆಂಟ್ ಎಳೆ ದುಕೊಳ್ಳಲು ಯತ್ನ ಮಾಡಿದ್ದ ಎನ್ನಲಾಗಿದೆ.ಕಲ್ಲೇಶಪ್ಪ ಒಂದೇ ತೋಟದಲ್ಲಿ ಎರಡು ಬೋರ್ ತೆಗೆಸಿದ್ದರು. ವಿದ್ಯುತ್ ಸಂಪರ್ಕ ಕಲ್ಪಿಸುವುದು ಬೇಡ ಅಂದಾಗ ಮಾತಿಗೆ ಮಾತು ಬೆಳೆದು ಗಲಾಟೆ ನಡೆದು ಕೊಲೆಯಲ್ಲಿ ಅಂತ್ಯ ಕಂಡಿದೆ. ಜ. 31ರಂದು ಗಲಾಟೆ ಆಗಿದ್ದು ಕಲ್ಲೇಶಪ್ಪ ಶಿವಮೊಗ್ಗದ ಖಾಸಗಿ ಆಸ್ಪತ್ರೆಯಲ್ಲಿ ದಾಖಲಾಗಿ, ಚಿಕಿತ್ಸೆ ಫಲಕಾರಿಯಾಗದೆ ಶನಿವಾರ ರಾತ್ರಿ ಸಾವನ್ನಪ್ಪಿದ್ದಾನೆ. ಅನಂದಪುರ ಗ್ರಾಮದ ನಾಗರಾಜಪ್ಪ, ಲೋಹಿತ್, ಗಂಗಾಧರಪ್ಪ ಮೇಲೆ ಕೊಲೆ ಆರೋಪ ಮಾಡಲಾಗಿದ್ದು ಕಡೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾ ಗಿದೆ.

ಮಂಗನ ಕಾಯಿಲೆಪೀಡಿತ ಪ್ರದೇಶದಲ್ಲಿ ಆಸ್ಪತ್ರೆಯಲ್ಲಿ ಸಿಬ್ಬಂದಿ ಇಲ್ಲ... ವೈದ್ಯರೂ ಇಲ್ಲ

ಸಾಗರ: ಮಳೆಗಾಲ ಮುಗಿದ ಮೇಲೆ ಚಳಿಗಾಲ ಆರಂಭವಾದರೆ ಸಾಕು ಸಾಗರ ಕ್ಷೇತ್ರದಲ್ಲಿ ಅತ್ಯಂತ ಭಯ ಹುಟ್ಟಿಸಿದ ಮಂಗನ ಕಾಯಿಲೆ ನೆನಪಾ ಗುತ್ತದೆ. ಇತ್ತೀಚಿನ ವರ್ಷಗಳಲ್ಲಿ ಈ ಕಾಯಿಲೆಯ ಮರಣ ಮೃದಂಗವೇ ನಡೆದು ಹೋಗಿದೆ.
ಮಂಗನ ಕಾಯಿಲೆಯು ಹೆಚ್ಚಾಗಿ ಕಾಣಿಸಿಕೊಳ್ಳುವ ಗ್ರಾಮಗಳು ಹೋಬಳಿ ಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಈಗ ವೈದ್ಯರೇ ಇಲ್ಲವಾಗಿ ರುವುದು ವಿಪರ್ಯಾಸವಾಗಿದೆ.
ಮಂಗನಕಾಯಿಲೆ ಹೆಚ್ಚಾಗಿ ಕಾಣಿಸಕೊಳ್ಳುವುದು ಬಾರಂಗಿ ಹೋಬಳಿ ಕರೂರು, ಕುಂದೂರು ಇನ್ನಿತರೆ ಗ್ರಾಮಗಳಲ್ಲಿ. ಆದರೆ ಈ ಬಾರಂಗಿ ಹೋಬಳಿಯ ಅರಳಗೋಡು ಮತ್ತು ಕರೂರು ಹೋಬಳಿಯ ತುಮರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯರು ಇಲ್ಲವಾಗಿದೆ. ಅರಳ ಗೋಡಿನಲ್ಲಿ ಆಂಬುಲೆನ್ಸ್ ಸಹ ಇಲ್ಲವಾಗಿದೆ.
ಸಾಗರ ಕೇತ್ರದಲ್ಲಿ ಒಟ್ಟು 16 ಆರೋಗ್ಯ ಕೇಂದ್ರಗಳು ಇವೆ. ಅದರಲ್ಲಿ ಸುಮಾರು 9 ಕಡೆ ವೈದ್ಯರು ಇಲ್ಲ. ಉಳಿದ ಕಡೆಗಳಲ್ಲಿ ವಾರಕ್ಕೆ ಮೂರು ಬಾರಿ ವೈದ್ಯರನ್ನು ತಾಲೂಕು ಆಡಳಿತ ನೇಮಿಸಿದೆ. ಈ ರೀತಿ ವೈದ್ಯರೇ ಇಲ್ಲವಾದರೆ ಹಿಂದೆ ಕಾಣಿಸಿಕೊಂಡ ರೀತಿಯಲ್ಲಿ ಮಂಗನ ಕಾಯಿಲೆ ಮತ್ತೆ ಕಾಣಿಸಿದರೆ ದೇವರೇ ಕಾಪಾಡಬೇಕಾಗಿದೆ.
ಸರ್ಕಾರಿ ಆರೋಗ್ಯ ಕ್ಷೇತ್ರದಲ್ಲಿ ಕೆಲಸ ಮಾಡುವ ಸಿಬ್ಬಂದಿ ಹಾಗೂ ವೈದ್ಯರ ಕೊರತೆ ಎದ್ದು ಕಾಣುತ್ತಿದೆ. ಜನಪ್ರತಿನಿಧಿಗಳು ವೈದ್ಯರ ಕೊರತೆ ಇಲ್ಲ ಎಂದು ಮೇಲ್ನೋಟಕ್ಕೆ ಹೇಳಿಕೆ ನೀಡಿದರೂ ವಾಸ್ತವವಾಗಿ ವೈದ್ಯರು ಹಾಗೂ ಸಿಬ್ಬಂದಿ ಕೊರತೆ ಹೆಚ್ಚಾಗಿದೆ. ಸಾಗರದಲ್ಲಿ 10 ಮಂದಿ ಆರೋಗ್ಯ ನಿರೀಕ್ಷಕರು ಇದ್ದಾರೆ. ಆದರೆ ಇದರಲ್ಲಿ 9 ಖಾಲಿ ಹುದ್ದೆ ಇವೆ. ಅಲ್ಲದೆ ಒಂದು ಮಹಿಳಾ ಮೀಸಲಾತಿ ಇದೆ. ಅಲ್ಲದೆ ಬಿ.ಹೆಚ್.ಓ. 3 ಹುದ್ದೆ, ಲ್ಯಾಬ್ ಟೆಕ್ನಿಷಿಯನ್ 4 ಹುದ್ದೆ ಖಾಲಿ ಇವೆ. ಅಲ್ಲದೆ ತಾಲೂಕು ಆಸ್ಪತ್ರೆ ಯಲ್ಲಿ 63 ಜನ ಸಿಬ್ಬಂದಿ ಇದ್ದು ಅದರಲ್ಲಿ 53 ಜನ ಮಾತ್ರ ಕಾರ್ಯ ನಿರ್ವಹಿಸುತ್ತಿದ್ದಾರೆ. ಇನ್ನು ಆರೋಗ್ಯ ಕೇಂದ್ರಗಳಲ್ಲಿ ಬಹುತೇಕ ಕಡೆ ವೈದ್ಯರ ಕೊರತೆ ಇದೆ.

ತಾಲೂಕು ಆರೋಗ್ಯ ಕೇಂದ್ರದಲ್ಲಿ ವೈದ್ಯರು ಸಿಬ್ಬಂದಿ ಕೊರತೆ ಇರುವುದು ನಿಜ. ಈ ವಿಚಾರ ಮೇಲಾಧಿಕಾರಿಗಳ ಗಮನಕ್ಕೆ ತರಲಾಗಿದೆ. ತುರ್ತಾಗಿ ಬೇಕಾಗಿರುವ ಕಡೆಗಳಲ್ಲಿ ವೈದ್ಯರನ್ನು ಬೇರೆ ಕಡೆಗಳಿಂದ ನಿಯೋಜಿಸ ಲಾಗಿದೆ. ಸದ್ಯದಲ್ಲಿಯೇ ಎಲ್ಲಾ ಸಿಬ್ಬಂದಿ ಹಾಗೂ ವೈದ್ಯರ ನೇಮಕಾತಿ ಯಾಗಲಿದೆ.
–ಡಾ.ಎಸ್.ಕೆ.ಭರತ್, ಸಾಗರ ತಾಲೂಕು ವೈದ್ಯಾಧಿಕಾರಿ.

ಧೂಳು ಹಿಡಿಯುತ್ತಿರುವ ಆರ್.ಟಿ.ಪಿಸಿಆರ್ ಲ್ಯಾಬ್:ಈ ಹಿಂದೆ ಕೋವಿಡ್ ಕಾಯಿಲೆ ಹೆಚ್ಚಾದಾಗ ಸಾಗರ ಉಪವಿಭಾಗೀಯ ಆಸ್ಪತ್ರೆಯಲ್ಲಿ ಆರ್.ಟಿ.ಪಿ.ಸಿ.ಆರ್. ಲ್ಯಾಬ್‌ನ್ನು 1 ಕೋಟಿ ವೆಚ್ಚದಲ್ಲಿ ಆರಂಭ ಮಾಡಲಾಯಿತು. ಈ ಯಂತ್ರಗಳು ಕೋವಿಡ್ ಕಾಯಿಲೆ ಹಾಗೂ ಮಂಗನ ಕಾಯಿಲೆಯ ವೈರಸ್ ಪತ್ತೆ ಹಚ್ಚಲು ಸಹಕಾರಿಯಾಗುತ್ತಿತ್ತು. ಇಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಯನ್ನು ಏಕಾಏಕಿ ಹಿಂಪಡೆಯಲಾಗಿದೆ. ಈಗ ಕೋಟಿ ವೆಚ್ಚದ ಯಂತ್ರಗಳು ಧೂಳು ಹಿಡಿಯುತ್ತಿವೆ. ಲಿಂಗನಮಕ್ಕಿ ಭಾಗದಲ್ಲಿ ಅಳವಡಿಸಲಾಗಿರುವ ರಕ್ತ ತಪಾಸಣೆ ಯಂತ್ರವು ಕೆಟ್ಟು ನಿಂತಿದೆ. ಸಾಗರ ಆಸ್ಪತ್ರೆಯಲ್ಲಿ ಕ್ಷ ಕಿರಣ ಎಕ್ಸರೇ ಯಂತ್ರ ಮಾತ್ರ ಇದೆ. ಆದರೆ ಯಂತ್ರವನ್ನು ನಿರ್ವಹಣೆ ಮಾಡುವ ಸಿಬ್ಬಂದಿಯೇ ಇಲ್ಲವಾಗಿದೆ. ಹಂದಿಗೋಡು ಕಾಯಿಲೆಗೆ ವಿಶೇಷವಾಗಿ

ಸರ್ಕಾರ ವೈದ್ಯರನ್ನು ನೇಮಿಸಿ ಅಲ್ಲಿಯ ಜನರನ್ನು ಪರಿಶೀಲಿಸಿ ಚಿಕಿತ್ಸೆ ನೀಡುವ ಸಲುವಾಗಿಯೇ ಪತ್ಯೇಕ ವಾದ ಪ್ಯಾಕೇಜ್ ನೀಡುತ್ತದೆ. ಆದರೆ ಈ ಕಾಯಿಲೆಗೆ ಚಿಕಿತ್ಸೆ ನೀಡುವ ವೈದ್ಯರು ಇಲ್ಲ, ಅವರು ಓಡಾಡುವ ವಾಹನವೂ ಇಲ್ಲವಾಗಿದೆ.
ಇತ್ತೀಚೆಗಷ್ಟೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಮಂಗನ ಕಾಯಿಲೆ ಪೀಡಿತ ಪ್ರದೇಶಕ್ಕೆ ಭೇಟಿ ನೀಡಿ ಸಾಗರ ಆಸ್ಪತೆಗೂ ಭೇಟಿ ನೀಡಿ ದ್ದರು. ಅವರು ಮೂರು ಜಿಲ್ಲೆಯ ಸಭೆಯನ್ನು ಸಹ ಸಾಗರದಲ್ಲಿ ಮಾಡಿ ರುವುದಲ್ಲದೆ ಯಾವುದೇ ಕುಂದುಕೊರತೆ ಇದ್ದರೂ ತಿಳಿಸಿ ಹೇಳಿದರೂ ಸಹ ಇಲ್ಲಿಯ ಶಾಸಕರು ಹಾಗೂ ಆರೋಗ್ಯ ಇಲಾಕೆಯ ತಾಲೂಕು ಅಧಿ ಕಾರಿಗಳು ಸಚಿವರ ಗಮನಕ್ಕೆ ತಾರದೆ ಇರುವುದು ವಿಚಿತ್ರವಾಗಿದೆ.

ಬಿಎಸ್‌ಎನ್‌ಎಲ್ ನೆಟ್‌ವರ್ಕ್ ಸಮಸ್ಯೆ : ಮನವಿ

ಚಿಕ್ಕಮಗಳೂರು: ತಾಲ್ಲೂಕಿನ ಖಾಂಡ್ಯ ಹೋಬಳಿ ಸುತ್ತಮುತ್ತಲು ಬಿಎಸ್‌ಎನ್‌ಎಲ್ ನೆಟ್‌ವರ್ಕ್ ಸಮಸ್ಯೆ ಉದ್ಭವಿಸಿದ್ದು ಶೀಘ್ರವೇ ಸರಿಪಡಿಸಬೇಕು ಎಂದು ಕಡವಂತಿ ಗ್ರಾ.ಪಂ. ಸದಸ್ಯ ವಿನೋದ್ ಬಿಎಸ್‌ಎನ್‌ಎಲ್ ಡಿಸ್ಟ್ರಿಕ್ ಜನರಲ್ ಮ್ಯಾನೇಜರ್ ಬಾಲಾಜಿಗೆ ಮನವಿ ಸಲ್ಲಿಸಿದರು.ಖಾಂಡ್ಯ ಹೋಬಳಿ ಬೊಗಸೆ ಗ್ರಾಮದಲ್ಲಿ 4ಜಿ ಬಿಎಸ್‌ಎನ್‌ಎಲ್ ಟವರ್ ಕಳೆದ ಒಂದು ವರ್ಷದ ಹಿಂದೆ ನಿರ್ಮಾಣಗೊಂಡು ಸೇವೆ ಒದಗಿಸಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ಸರಿಯಾಗಿ ನೆಟ್‌ವರ್ಕ್ ಸಿಗದೇ ದೂರವಾಣಿ ಕರೆ ಹಾಗೂ ಆನ್‌ಲೈನ್‌ಗೂ ಬಹಳಷ್ಟು ಸಮಸ್ಯೆ ಎಂದು ವಿನೋದ್ ತಿಳಿಸಿದರು.ಈ ಹಿಂದೆ ನಿರ್ಮಾಣಗೊಂಡಿದ್ದ ಟವರ್ ಸೋಲಾರ್‌ನಿಂದ ಚಾಲನೆಗೊಂಡು ಖಾಂಡ್ಯ, ಕಡವಂತಿ, ಬೊಗಸೆ ಸೇರಿದಂತೆ ಅನೇಕ ಗ್ರಾಮಗಳಿಗೆ ಆಧಾರವಾಗಿತ್ತು. ಇದೀಗ ಟೆಕ್ನಿಕಲ್ ಮತ್ತು 750 ಬ್ಯಾಟರಿ ಸಮಸ್ಯೆ ಅಥವಾ ಪೂರ್ಣಪ್ರಮಾಣದ ವಿದ್ಯುತ್ ಇಲ್ಲದ ಕಾರಣ ತುಂಬಾ ನೆಟ್‌ವರ್ಕ್ ಸಮಸ್ಯೆ ಉಂಟಾಗುತ್ತಿದೆ ಎಂದು ಹೇಳಿದರು.ಬಿಎಸ್‌ಎನ್‌ಎಲ್ ಅಧಿಕಾರಿ ಬಾಲಾಜಿ ಪ್ರತಿಕ್ರಿಯಿಸಿ, ಫೆ.3ರಂದು ಗ್ರಾಮಕ್ಕೆ ಸಂಬಂಧಿಸಿದ ಅಧಿಕಾರಿಗಳು ಭೇಟಿ ನೀಡುವರು. ನೆಟ್‌ವರ್ಕ್ ತೊಂದರೆ ಅಥವಾ ಬಿಎಸ್‌ಎನ್‌ಎಲ್ ಸಮಸ್ಯೆಗಳಿಂದ ಬಳಲುವವರು ಭೇಟಿ ಮಾಡಿ ಚರ್ಚಿಸಿ ಸಮಸ್ಯೆ ಬಗೆಹರಿಸಲಾಗುವುದು ಎಂದು ಭರವಸೆ ನೀಡಿದರು.

ಅಖಿಲ ಭಾರತ ವಿದ್ಯಾರ್ಥಿ ಪರಿಷತ್‌ನದ್ದು ರಾಷ್ಟ್ರವಾದ

ಶಿವಮೊಗ್ಗ: ಕೆಲವರು ಜಾತಿವಾದ, ಪ್ರದೇಶವಾದವನ್ನು ಪ್ರತಿಪಾದಿಸುತ್ತಾರೆ. ಆದರೆ ಎಬಿವಿಪಿಯದ್ದು ರಾಷ್ಟ್ರವಾದ. ಸ್ವಾತಂತ್ರ್ಯ ಬಳಿಕ ನಮ್ಮನ್ನು ಆಳಿದವರು ನಮ್ಮ ದೇಶವನ್ನು ಚೀನಾ, ಅಮೆರಿಕ, ಇಂಗ್ಲೆಂಡ್‌ನ ನಕಲು ಮಾಡಲು ಯತ್ನಿಸು ತ್ತಿದ್ದರು. ಆದರೆ ಭಾರತ ಎಂದಿಗೂ ಭಾರತವಾಗಿಯೇ ಉಳಿಯಬೇಕು ಎಂಬ ಪರಿಕಲ್ಪನೆಯಲ್ಲಿ ಕೆಲಸ ಮಾಡಿದ್ದು ಎಬಿವಿಪಿ ಎಂದು ಎಬಿವಿಪಿ ರಾಷ್ಟ್ರೀಯ ಕಾರ್ಯದರ್ಶಿ ಶಾಲಿನಿ ವರ್ಮಾ ಹೇಳಿದರು.ಎಬಿವಿಪಿ ಪ್ರಾಂತ ಸಮ್ಮೇಳನದ ನಿಮಿತ್ತ ಏರ್ಪಡಿಸಿದ್ದ ಶೋಭಾಯಾತ್ರೆ ಬಳಿಕ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಅವರು, ಈ ದೇಶದ ಮಹಾಪುರುಷ ವೀರ ಸಾವರ್ಕರ್ ಅವರನ್ನು ಅವಮಾನಿಸಿದರು. ಸಂವಿಧಾನ ನೀಡಿದ ಡಾ. ಅಂಬೇಡ್ಕರ್ ಅವರನ್ನು ಅವಮಾನಿಸಿದರು. ಈಗ ಆದಿವಾಸಿ ಕುಟುಂಬದಿಂದ ಬಂದ ರಾಷ್ಟ್ರಪತಿಯನ್ನೂ ಅವಮಾನಿಸುತ್ತಿದ್ದಾರೆ. ಈ ನೆಲದಲ್ಲಿ ರಾಜನ ಮಗನೇ ರಾಜನಾಗಬೇಕೆಂದಿಲ್ಲ. ಇಲ್ಲಿ ಆದಿವಾಸಿ ಕುಟುಂಬದ ಮಹಿಳೆಯೂ ರಾಷ್ಟ್ರಪತಿ ಯಾಗಬಲ್ಲರು ಎಂದು ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ವಿರುದ್ಧ ವಾಗ್ದಾಳಿ ನಡೆಸಿದರು.ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಕುಂಭಮೇಳದ ಧಾರ್ಮಿಕ ಮಹತ್ವ ಅರಿತು ಕೋಟ್ಯಂತರ ಮಂದಿ ಅದರಲ್ಲಿ ಭಾಗವಹಿಸುತ್ತಿದ್ದಾರೆ. ಆದರೆ ಪಪ್ಪು ವಿಜೆಂಟ್‌ವೊಬ್ಬರು ಕುಂಭಮೇಳದಲ್ಲಿ ಮುಳುಗಿದ್ದರೆ ಬಡತನ ದೂರಾಗುತ್ತ ದೆಯೇ ಎಂದು ಪ್ರಶ್ನಿಸಿದ್ದಾರೆ. ಎಬಿವಿಪಿ

ಕಾರ್ಯಕರ್ತರು ನಿಮಗೆ ಟಿಕೆಟ್ ಬುಕ್ ಮಾಡಿ ಕೊಡುತ್ತಾ–ರೆ. ಕುಂಭಮೇಳದಲ್ಲಿ ಮುಳುಗಿ ನಿಮ್ಮ ದುರ್ಬದ್ಧಿಯನ್ನು ತೊಡೆದುಕೊಳ್ಳಿ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ತಿರುಗೇಟು ನೀಡಿದರು.ದಕ್ಷಿಣ ಪ್ರಾಂತ ಅಧ್ಯಕ್ಷ ಡಾ. ಎಂ.ಎಸ್.ರವಿ, ಕಾರ್ಯದರ್ಶಿ ಎಚ್.ಕೆ.ಪ್ರವೀಣ್, ದಕ್ಷಿಣ ಕನ್ನಡ ಜಿಲ್ಲಾ ಸಂಚಾಲಕ ಸುವಿತ್ ಶೆಟ್ಟಿ, ಪ್ರಮುಖರಾದ ಜೆ.ಕೆ.ಗಗನ್, ಬಿ.ಲೋಹಿತ್, ಎಚ್.ಬಿ.ಪ್ರಜ್ವಲ್ ಮುಂತಾದವರು ಉಪಸ್ಥಿತರಿದ್ದರು.

ದೇಶದ ಸಂಪ್ರದಾಯ–ಸಂಸ್ಕಾರಗಳು ಪೂರಕ

ಆನಂದಪುರ: ಭಾರತ ದೇಶದ ಶ್ರೇಷ್ಠತೆ ಹೆಚ್ಚಿಸಲು ದೇಶದ ಸಂಪ್ರದಾಯ, ಸಂಸ್ಕೃತಿ, ಸಂಸ್ಕಾರಗಳು ಪೂರಕವಾಗಿವೆ ಎಂದು ಬಂಗಾರಮಕ್ಕಿಯ ಮಾರುತಿ ಗುರೂಜಿ ತಿಳಿಸಿದರು.

ಆನಂದಪುರ ಬಸವನ ಬೀದಿಯ ಶ್ರೀ ವೀರಾಂಜನೇಯ ಸ್ವಾಮಿ 15ನೇ ವಾರ್ಷಿಕೋತ್ಸವ ಅಂಗವಾಗಿ ಸೀತಾರಾಮ ಸಭಾಭವನದಲ್ಲಿ ನಡೆದ ಧಾರ್ಮಿಕ ಸಭಾ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತ ನಾಡಿದರು.

ಪ್ರತಿಯೊಂದು ದೇವಸ್ಥಾನಗಳಲ್ಲೂ ನಿತ್ಯ ಪೂಜೆ ಪುರಸ್ಕಾರ ಭಜನೆ ಉತ್ಸವ ಗಳು ನಡೆಯುವುದರಿಂದ ಗ್ರಾಮದ ಅಭಿವೃದ್ಧಿಯಾಗಲಿದೆ. ದೇವಾಲಯಗಳು ಗ್ರಾಮದ ಕೈಗನ್ನಡಿ ಇದ್ದಂತೆ. ನಾವು ನಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಬೇಕು. ಭಾರತ ದೇಶದ ಶ್ರೇಷ್ಠತೆ ಹೆಚ್ಚಿಸಲು ಇಲ್ಲಿನ ಸಂಪ್ರದಾಯ, ಸಂಸ್ಕೃತಿ, ಸಂಸ್ಕಾರಗಳು ಪೂರಕವಾಗಿವೆ ಎಂದರು.

ಮಾರ್ಚ್ 31ರಿಂದ ಏಪ್ರಿಲ್ 13ರವರೆಗೆ ಶ್ರೀ ಕ್ಷೇತ್ರ ಬಂಗಾರಕ್ಕಿಯಲ್ಲಿ ನಡೆ ಯುವ ವೀರಾಂಜನೇಯ ಸ್ವಾಮಿಯ ಪುನರ್ ಪ್ರತಿಷ್ಠಾಪನೆ, ನೂತನ ಗೋಪುರ ಸಮರ್ಪಣೆ, ಸಂಸ್ಕೃತಿ ಕುಂಭ ಮಲೆನಾಡು ಉತ್ಸವ, ಗುರೂಜಿ ಯವರ ರಜತೋತ್ಸವ ಪೀಠಾರೋ

ರಾಜ್ಯದ ಕೆರೆಗಳ ಒತ್ತುವರಿ ತೆರವಿಗೆ ಗಡುವು ನೀಡಿದ ಮುಖ್ಯಮಂತ್ರಿ

ಬೆಂಗಳೂರು,ಜ.29: ರಾಜ್ಯದಲ್ಲಿರುವ ಕೆರೆಗಳ ಒತ್ತುವರಿ ತೆರವು ಕಾರ್ಯಾಚರಣೆ ಪೂರ್ಣಗೊಳಿಸಲು ಗಡುವು ವಿಧಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ 6 ತಿಂಗಳ ಎಲ್ಲಾ ಕೆರೆಗಳ ಸಮೀಕ್ಷೆ ಕಾರ್ಯ ಪೂರ್ಣಗೊಳಿಸಬೇಕು ಎಂದು ತಾಕೀತು ಮಾಡಿದ್ದಾರೆ

ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ ಸಭೆ ನಡೆಸಿದ ಅವರು ಕೆರೆಗಳ ಸಂರಕ್ಷಣೆ ಕಾರ್ಯವನ್ನು ನರೇಗಾ ಅಡಿಯಲ್ಲಿ ದೊಡ್ಡ ಪ್ರಮಾಣದಲ್ಲಿ ಕೈಗೆತ್ತಿಕೊಳ್ಳಬೇಕು ಎಂದು ಸೂಚಿಸಿದರು.

ರಾಜ್ಯದಲ್ಲಿ ಒಟ್ಟು 40,998 ಕೆರೆಗಳಿದ್ದು, ಇವುಗಳ ಪೈಕಿ ಗ್ರಾಮೀಣಾಭಿವೃದ್ಧಿ ಇಲಾಖೆ ವ್ಯಾಪ್ತಿಯಲ್ಲಿ 26,365ಕೆರೆಗಳು, ಸಣ್ಣ ನೀರಾವರಿಯಲ್ಲಿ 3,247, ಕೆರೆಗಳಿವೆ.ರಾಜ್ಯದಲ್ಲಿ 30 ಸಾವಿರ ಕೆರೆಗಳ ಸರ್ವೇ ಕಾರ್ಯವನ್ನು ಕಂದಾಯ ಇಲಾಖೆ ಈಗಾಗಲೇ ಪೂರ್ಣಗೊಳಿಸಿದೆ. ಉಳಿದಿರುವ 10,754 ಕೆರೆಗಳ ಸಮೀಕ್ಷೆ ಕಾರ್ಯವನ್ನು ಆರು ತಿಂಗಳ ಒಳಗಾಗಿ ಪೂರ್ಣಗೊಳಿಸಬೇಕು ಎಂದು ಆದೇಶಿಸಿದರು

ಕೆರೆ ಒತ್ತುವರಿ ತೆರವು ಕಾರ್ಯ ಬಾಕಿಯಿರುವ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಲಾಗುವುದು. ಮಳೆಗಾಲದ ಒಳಗಾಗಿ ಕೆರೆ ಒತ್ತುವರಿಯನ್ನು ತೆರವುಗೊಳಿಸಿ, ಕೆರೆಗಳನ್ನು ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಬೇಕು ಎಂದು

ತಾಕೀತು ಮಾಡಿದರು ಮೀನುಗಾರಿಕಾ ಇಲಾಖೆ ವತಿಯಿಂದ ಎಲ್ಲಾ ಕೆರೆಗಳಿಗೆ ಮೀನು ಮರಿಗಳನ್ನು ಬಿಡುವ ಕಾರ್ಯ ಮಾಡಿದರೆ ಆದಾಯ ಗಳಿಸಲು ಸಾಧ್ಯವಿದೆ.

ನಗರ ಪ್ರದೇಶದ ಕೆರೆಗಳು ಮಾತ್ರವಲ್ಲದೆ, ರಾಜ್ಯದ ಎಲ್ಲಾ ಕೆರೆಗಳ ಮಾಲಿನ್ಯದ ಮಟ್ಟವನ್ನು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿಗಳು ಪರಿಶೀಲಿಸಿ ನಿಯಮಿತವಾಗಿ ವರದಿ ಸಲ್ಲಿಸಬೇಕು ಎಂದು ಹೇಳಿದರು.

ಜನಾರ್ಧನರೆಡ್ಡಿ, ರಾಮುಲು ಜಗಳ ನಿಲ್ಲಿಸಲು ಯಶಸ್ವಿಯಾದ ಬಿಜೆಪಿ ಹೈಕಮಾಂಡ್

ಬೆಂಗಳೂರು,ಜ.29: ಸಂಡೂರು ವಿಧಾನಸಭೆ ಉಪ ಚುನಾವಣೆ ಸೋಲಿನ ಕಾರಣದ ನೆಪದಲ್ಲಿ ಬಹಿರಂಗ ವಾಕ್ಸಮರ ನಡೆಸುತ್ತಿದ್ದ ಮಾಜಿ ಮಂತ್ರಿಗಳಾದ ಜನಾರ್ದನ ರೆಡ್ಡಿ ಮತ್ತು ಶ್ರೀರಾಮುಲು ಅವರ ಬಾಯಿಗಳಿಗೆ ಬಿಜೆಪಿ ಹೈಕಮಾಂಡ್ ಬೀಗ ಹಾಕಿದೆ. ರಾಜಕೀಯ ಹಾಗೂ ವೈಯಕ್ತಿಕ ಕಾರಣದಿಂದ ಈ ಇಬ್ಬರ ನಡುವೆ ಬಿಕ್ಕಟ್ಟು ಉಲ್ಬಣಿಸಿದ್ದು, ಬಹಿರಂಗ ವಾಕ್ಸಮರದ ಮೂಲಕ ರಾಜ್ಯಾದ್ಯಂತ ದೊಡ್ಡ ಸುದ್ದಿಗೆ ಕಾರಣವಾಗಿದ್ದಾರೆ, ಇದರಿಂದ ಪಕ್ಷ ಸಂಘಟನೆಯ ಮೇಲೆ ಗಂಭೀರ ಪರಿಣಾಮ ಉಂಟಾಗುತ್ತಿದೆ ಎಂಬ ವರದಿಗಳ ಹಿನ್ನೆಲೆಯಲ್ಲಿ ಮಧ್ಯಪ್ರವೇಶಿಸಿದ ಬಿಜೆಪಿ ಹೈಕಮಾಂಡ್ ಇಬ್ಬರಿಗೂ ಕರೆ ಮಾಡಿ ಸುಮ್ಮನಿರುವಂತೆ ಸೂಚನೆ ನೀಡಿದೆ.

ಬಿಜೆಪಿ ಹೈಕಮಾಂಡ್ ಮಟ್ಟದ ನಾಯಕರು ಮತ್ತು ಸಂಘದ ಪ್ರಮುಖರೊಬ್ಬರು ಇಬ್ಬರಿಗೆ ಸುಮ್ಮನಿರುವಂತೆ ಸೂಚನೆಯನ್ನು ನೀಡಿದ್ದಾರೆ. ಅಲ್ಲದೆ ವಿದ್ಯಮಾನಗಳ ಕುರಿತು ಚರ್ಚೆಗೆ ದೆಹಲಿಗೆ ಬರುವಂತೆ ಸೂಚನೆ ನೀಡಿದ್ದಾರೆ ಎಂದು ತಿಳಿದುಬಂದಿದೆ.

ಬಿಜೆಪಿ ಹೈಕಮಾಂಡ್ ಮಾತ್ರವಲ್ಲದೆ, ಆರ್ ಎಸ್ ಎಸ್ ಪ್ರಮುಖರೊಬ್ಬರಿಂದ ರಾಮುಲು, ಜನಾರ್ದನ ರೆಡ್ಡಿ ಇಬ್ಬರಿಗೂ ಕರೆ ಮಾಡಿ ಎಚ್ಚರಿಕೆ ಪಾಠ ಮಾಡಿದ್ದಾರೆ ಎಂಬ ಮಾಹಿತಿಯೂ ಇದೆ.ಇಬ್ಬರಿಗೂ ಸಂಘ ಪರಿವಾರದ ಪ್ರಮುಖರೊಬ್ಬರಿಂದ ಪ್ರತ್ಯೇಕ ಭೇಟಿಗೂ ಸೂಚನೆ ನೀಡಿದ್ದಾರೆ.

ಅಪಹರಣಕಾರನ ಕಾಲಿಗೆ ಗುಂಡು ಹೊಡೆದ ಬಳ್ಳಾರಿ ಪೊಲೀಸರು

ಬೆಂಗಳೂರು,ಜ.29: ಇವರೊಬ್ಬ ಗಟ್ಟಿಕುಳ ಇವರನ್ನು ಅಪಹರಿಸಿದರೆ ಬಾರಿ ಮೊತ್ತ ಹಾಗೂ ಚಿನ್ನದ ಗಟ್ಟಿ ಸಿಗಲಿದೆ ಎಂದು ಭಾವಿಸಿ ವ್ಯಕ್ತಿಯನ್ನು ಅಪಹರಿಸಿದ ದುಷ್ಕರ್ಮಿಗಳು ಅವರಿಂದ ಹಣ ಸಿಗುವುದಿಲ್ಲ ಎಂದು ರಾತ್ರಿಆದ ನಂತರ ಅವರೇ 300 ರೂಪಾಯಿ ಕೊಟ್ಟು ಅಪಹೃತ ವ್ಯಕ್ತಿಯನ್ನು ಬಿಡುಗಡೆ ಮಾಡಿದ್ದಾರೆ. ಇದರ ನಂತರ ಪೊಲೀಸರಿಂದ ಗುಂಡೇಟು ತಿಂದಿದ್ದಾರೆ

ಬಳ್ಳಾರಿ ಜಿಲ್ಲಾ ಆಸ್ಪತ್ರೆಯ ವೈದ್ಯ ಸುನಿಲ್ ಕುಮಾರ್ ಅವರು ಜನವರಿ 25ರ ಮುಂಜಾನೆ ಆರು ಗಂಟೆ ಸುಮಾರಿನಲ್ಲಿ ಬಳ್ಳಾರಿ ನಗರದ ಸತ್ಯನಾರಾಯಣಪೇಟೆ ಬಳಿ ವಾಯು ವಿಹಾರ ನಡೆಸುತ್ತಿದ್ದ ವೇಳೆ ಅವರನ್ನು ಅಪಹರಿಸಿದ್ದ ಅಪಹರಣಕಾರರು ಅವರ ಸೋದರನಿಗೆ ಕರೆ ಮಾಡಿ ನಿಮ್ಮ ಅಣ್ಣನನ್ನು ಬಿಡುಗಡೆ ಮಾಡಬೇಕಾದರೆ 3 ಕೋಟಿ ಹಣ ಹಾಗೂ ಮೂರು ಕಿಲೋ ಚಿನ್ನ ನೀಡುವಂತೆ ಬೇಡಿಕೆ ಇಟ್ಟಿದ್ದರು.

ಆನಂತರ ತಮ್ಮ ಕಾರಿನಲ್ಲಿ ಅಪಹೃತ ವ್ಯಕ್ತಿಯನ್ನು ಚಿತ್ರದುರ್ಗ, ದಾವಣಗೆರೆ ,ಕೊಪ್ಪಳ ಸುತ್ತಮುತ್ತ ಸುತ್ತಾಡಿಸಿದ್ದಾರೆ. ಅಷ್ಟೇ ಅಲ್ಲ ಅವರ ಜೇಬುಗಳನ್ನು ತಡಕಾಡಿದ್ದಾರೆ ಆದರೆ ಎಲ್ಲಿಯೂ ಅವರಿಗೆ ಒಂದು ರೂಪಾಯಿ ಸಿಕ್ಕಿಲ್ಲ ಆನಂತರ ಅವರ ಸೋದರನಿಗೆ ಕರೆ ಮಾಡಿದರು ಕೂಡ ಹಣ ಕೊಟ್ಟು ಬಿಡಿಸಿಕೊಂಡು ಹೋಗುವ ಬಗ್ಗೆ ಯಾವುದೇ ಭರವಸೆ ಸಿಕ್ಕಿಲ್ಲ.

ಇದರಿಂದ ಬೇಸರಗೊಂಡ ಅವರು ಅಂತಿಮವಾಗಿ ಡಾ. ಸುನಿಲ್ ಕುಮಾರ್ ಅವರನ್ನು ಕುರುಗೋಡು ತಾಲೂಕಿನ ಸೋಮಸಮುದ್ರ ಗ್ರಾಮದ ಬಳಿ ಬಿಟ್ಟು 300 ರೂ. ಕೊಟ್ಟು ಬಸ್ಸಿನಲ್ಲಿ ಹೋಗುವಂತೆ ಸೂಚಿಸಿ ಅಲ್ಲಿಂದ ತೆರಳಿದ್ದಾರೆ.

ಇದಾದ ನಂತರ ಡಾ. ಸುನಿಲ್ ಕುಮಾರ್ ಅವರು ಪೊಲೀಸರನ್ನು ಭೇಟಿ ಮಾಡಿ ತಮ್ಮ ಅಪಹರಣ ಹಾಗೂ ಅಪಹರಣಕಾರರ ಕುರಿತಂತೆ ಮಾಹಿತಿ ನೀಡಿದ್ದಾರೆ ಇದನ್ನು ಆಧರಿಸಿ ಕಾರ್ಯಾಚರಣೆ ನಡೆಸಿದ ಬಳ್ಳಾರಿ ಪೊಲೀಸರು ಬಳ್ಳಾರಿ ನಗರ ವಾಸಿಗಳಾದ ಶ್ರೀಕಾಂತ್ (44), ರಾಕೇಶ್(44), ತರುಣ್(22), ಅರುಣ್(25), ಭೋಜರಾಜ್(25), ಸಾಯಿಕುಮಾರ್(21) ಮತ್ತು ಪುರುಷೋತ್ತಮ್ ಎಂಬುವರನ್ನು ಅಪಹರಣ ಆರೋಪದಲ್ಲಿ ಬಂಧಿಸಿದ್ದಾರೆ. ಬಂಧಿತರನ್ನು ಇಂದು ಬೆಳಿಗ್ಗೆ ಸ್ಥಳ ಮಹಜರು ಮತ್ತು ಕೃತ್ಯಕ್ಕೆ ಬಳಸಿದ ವಸ್ತುಗಳನ್ನು ವಶಕ್ಕೆ ಪಡೆದುಕೊಳ್ಳಲು ಕರೆದುಕೊಂಡು ಹೋಗುತ್ತಿದ್ದ ವೇಳೆ ಶ್ರೀಕಾಂತ್ ಎಂಬಾತ ಗಾಂಧಿನಗರ ಪೊಲೀಸ್ ಠಾಣೆಯ ಕಾನ್‌ಸ್ಟೆಬಲ್ ಕಾಳಿಂಗ ಅವರ ಮೇಲೆ ಹಲ್ಲೆ ನಡೆಸಿದ್ದ.

ಸ್ವಲ್ಪ ಕಷ್ಟ ಆದರೂ... ಬಾಂಗ್ಲಾದ ಅಕ್ರಮ ವಲಸಿಗರಿಗೂ ಭಾರತ ನೆಲೆ ಕಲ್ಪಿಸಬೇಕು

ರಾಹುಲ್ ಮೆಂಟರ್ ಸ್ಯಾಮ್ ಪಿತ್ರೋಡಾ ವಿವಾದ!

ನವದೆಹಲಿ: ಬಾಂಗ್ಲಾದೇಶಿ ವಲಸಿಗರು ಒಂದು ವೇಳೆ ಭಾರತಕ್ಕೆ ಬರಲು ಬಯಸಿದರೆ, ಅದು ಅಕ್ರಮವಾಗಿದ್ದರೂ ಸಹ ನಾವು ಎಲ್ಲರನ್ನೂ ಸೇರಿಸಿಕೊಳ್ಳಬೇಕು ಎಂದು ಹೇಳುವ ಮೂಲಕ ವಿಪಕ್ಷ ನಾಯಕ ರಾಹುಲ್ ಗಾಂಧಿ ಆಪ್ತ ಸಹಾಯಕ ಸ್ಯಾಮ್ ಪಿತ್ರೋಡಾ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲಿನ ದೌರ್ಜನ್ಯದ ನಡುವೆ ಭಾರತೀಯ ಸಾಗರೋತ್ತರ ಕಾಂಗ್ರೆಸ್ ಅಧ್ಯಕ್ಷ ಸ್ಯಾಮ್ ಪಿತ್ರೋಡಾ ಈ ಹೇಳಿಕೆ ರಾಜಕೀಯವಾಗಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಬಾಂಗ್ಲಾದೇಶಿಗರು ಇಲ್ಲಿಗೆ ಬರಲು ಬಯಸಿದರೆ, ಅಕ್ರಮವಾಗಿಯಾದರೂ, ಅವರು ಬರಲಿ. ನಾವು ಎಲ್ಲರನ್ನೂ ಸೇರಿಸಿಕೊಳ್ಳಬೇಕು. ನಮಗೆ ಅದರಿಂದ ಸ್ವಲ್ಪ ಕಷ್ಟವಾದರೂ ಪರವಾಗಿಲ್ಲ, ಸಹಿಸಿಕೊಳ್ಳಬೇಕು ಎಂದು ಹೇಳುವ ಮೂಲಕ ವಲಸಿಗರು ಭಾರತದಲ್ಲಿ ನೆಲೆಸಬೇಕೆಂದು ಪ್ರತಿಪಾದಿಸಿದ್ದು ಈ ಸಮಸ್ಯೆಯನ್ನು ಪರಿಹರಿಸಲು ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ಟೀಕಿಸಿದರು.

ಅಕ್ರಮ ವಲಸಿಗರ ವಿರುದ್ಧ ಕೇಂದ್ರ ಸರ್ಕಾರದ ಕಠಿಣ ಕ್ರಮವನ್ನು ಟೀಕಿಸಿದ ಪಿತ್ರೋಡಾ, ಸರ್ಕಾರವು ವಲಸೆಯನ್ನು ನಿಭಾಯಿಸುವ ಬದಲು ಜಾಗತಿಕ ತಾಪಮಾನದ ಏರಿಕೆಯಂತಹ ಸಾರ್ವಜನಿಕರಿಗೆ ಮುಖ್ಯವಾದ ಸಮಸ್ಯೆಗಳನ್ನು ಪರಿಹರಿಸುವತ್ತ ಹೆಚ್ಚು ಗಮನಹರಿಸಬೇಕು ಎಂದು ಒತ್ತಿ ಹೇಳಿದ್ದಾರೆ.

ಫೆಬ್ರವರಿ 5ರ ದೆಹಲಿ ವಿಧಾನಸಭಾ ಚುನಾವಣೆಗೂ ಮುನ್ನ ಸ್ಯಾಮ್ ಪಿತ್ರೋಡಾರ ಈ ಹೇಳಿಕೆ ರಾಜಕೀಯ ಪಕ್ಷಗಳು ಅಸ್ತ್ರವಾಗಿ ಬಳಸಿಕೊಳ್ಳುತ್ತಿವೆ. ಆಡಳಿತಾರೂಢ ಎಎಪಿ ಬಾಂಗ್ಲಾದೇಶಿ ನುಸುಳುಕೋರರಿಗೆ ನಕಲಿ ಆಧಾರ್ ಕಾರ್ಡ್‌ಗಳನ್ನು ಸೃಷ್ಟಿಸುವಲ್ಲಿ ಭಾಗಿಯಾಗಿದೆ ಎಂದು ಬಿಜೆಪಿ ಆರೋಪಿಸಿದ್ದು ದೆಹಲಿಯ ಆಡಳಿತ ಪಕ್ಷವು ಮುಂಬರುವ ಚುನಾವಣೆಗಳಿಗೆ ಅವರನ್ನು "ಮತ ಬ್ಯಾಂಕ್" ಆಗಿ ಬಳಸುತ್ತಿದೆ ಎಂದು ಆರೋಪಿಸಿದೆ.

ಮೊರಾರ್ಜಿ ಪ್ರಾಂಶುಪಾಲರ ಅಮಾನತ್ತಿಗೆ ಸಚಿವರಿಗೆ ಮನವಿ

ಚಿಕ್ಕಮಗಳೂರು: ನ್ಯಾಯಬದ್ಧ ವಿಚಾರಣೆಗಾಗಿ ತೆರಳಿದ್ದ ದಲಿತ ಮುಖಂಡರ ಮೇಲೆ ಹಲ್ಲೆಗೆ ಮುಂದಾದ ಬೀಕನಹಳ್ಳಿ ಮೊರಾರ್ಜಿ ಶಾಲೆ ಪ್ರಾಂಶುಪಾಲ ಹಾಗೂ ಸಿಬ್ಬಂದಿಗಳನ್ನು ಅಮಾನತ್ತು ಗೊಳಿಸಿ ಸೂಕ್ತ ಕ್ರಮ ವಹಿಸಬೇಕು ಎಂದು ದಸಂಸ ಮುಖಂಡರು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ಅವರಿಗೆ ಮನವಿ ಸಲ್ಲಿಸಿದರು.ಬಳಿಕ ಮಾತನಾಡಿದ ದಸಂಸ ರಾಜ್ಯ ಸಮಿತಿ ಸದಸ್ಯ ಮರ್ಲೆ ಅಣ್ಣಯ್ಯ ಇತ್ತೀಚೆಗೆ ಮೊರಾರ್ಜಿ ಶಾಲೆ ಯ ನೌಕರರ ದೂರಿನ ಮೇರೆಗೆ ಶಾಲೆಗೆ ಭೇಟಿ ನೀಡಿದ್ದು ಪ್ರಾಂಶುಪಾಲರ ಜೊತೆ ನೂನ್ಯತೆ ಬಗ್ಗೆ ಚರ್ಚಿಸುವಾಗ ಶಾಲೆಯ ಸಿಬ್ಬಂದಿಗಳು, ಪ್ರಾಂಶುಪಾಲರ ಆದೇಶದಂತೆ ದಲಿತ ಮುಖಂಡರು ಹಾಗೂ ಮಹಿಳಾ ನೌಕರೆ ಗಂಡನ ಮೇಲೆ ಏಕಾಏಕಿ ಹಲ್ಲೆ ನಡೆಸಿ ಜಾತಿನಿಂದನೆ ಎಸಗಿದ್ದಾರೆ ಎಂದರು.ಪ್ರಕರಣದ ಸಂಬಂಧ ಪ್ರಾಂಶುಪಾಲರು, ಸಿಬ್ಬಂದಿಗಳ ಜಾತಿ ನಿಂದನೆ ದೌರ್ಜನ್ಯ ಕಾಯ್ದೆಯಡಿ ದೂರು ದಾಖಲಿಸಿದ್ದು ಈ ಬಗ್ಗೆ ಯಾವುದೇ ಕ್ರಮ ವಹಿಸುತ್ತಿಲ್ಲ. ಅಲ್ಲದೇ ಪ್ರಾಂಶುಪಾಲರು ಶಾಲೆಯ ನಿರ್ವಾಣ ಸಮಿತಿ ಎಂಬ ಅಕ್ರಮ ಸಮಿತಿಯ ಹೆಸರಿನಲ್ಲಿ ಎತ್ತಿಕಟ್ಟಿ ಸಂಘಟನೆ ಪ್ರಮುಖರ ಮೇಲೆ ಇಲ್ಲಸಲ್ಲದ ದೂರುಗಳನ್ನು ದಾಖಲಿಸಿದ್ದಾರೆ ಎಂದು ಆರೋಪಿಸಿದರು.ಪ್ರಸ್ತುತ ದಸಂಸ ಸಂಘಟನೆ ಮೂರ್ನಾಲ್ಕು ದಶಕಗಳಿಂದ ಶೋಷಿತರ ಪರವಾಗಿ ಹೋರಾಟ ಮಾಡುತ್ತಿದ್ದು ಈ ಆರೋಪದಿಂದ ಸಂಘಟನೆಗೆ ನೋವುಂಟಾಗಿದೆ. ಪ್ರಾಂಶುಪಾಲರು ತಪ್ಪನ್ನು ಮುಚ್ಚಿಕೊಳ್ಳಲು ರಾಜಕೀಯ ಪ್ರಭಾವ ಬಳಸುತ್ತಿದ್ದು, ಇದರಿಂದ ಶಾಲೆಯ ಹೆಸರು ಹಾಳು ಮಾಡುತ್ತಿರುವ ಕಾರಣ ಮಕ್ಕಳ ವಿದ್ಯಾಭ್ಯಾಸಕ್ಕೆ ತೀವ್ರ ಅಡ್ಡಿಯಾಗುತ್ತಿದೆ ಎಂದು ಹೇಳಿದರು.ದೌರ್ಜನ್ಯ ಪ್ರಕರಣ ಸಂಬಂಧ ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗೆ ದೂರು ಸಲ್ಲಿಸಿದ್ದರೂ ಕ್ರಮ ಜರುಗಿಲ್ಲ. ಆದ್ದರಿಂದ ಜಿಲ್ಲಾ ಉಸ್ತುವಾರಿ ಸಚಿವರು ಮಧ್ಯಪ್ರವೇಶಿಸಿ ತಪ್ಪಿಸಿಗಿರುವ ಮೊ ರಾರ್ಜಿ ಶಾಲೆಯ ಪ್ರಾಂಶುಪಾಲರ ಅಮಾನತ್ತುಗೊಳಿಸಬೇಕು. ವಿಳಂಭ ನೀತಿ ಅನುಸರಿದರೆ ಜಿ.ಪಂ. ಕಚೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ದಸಂಸ ತಾಲ್ಲೂಕು ಸಂಚಾಲಕರಾದ ಮಂಜಯ್ಯ, ಮಂಜುನಾಥ್ ನಂಬಿಯಾರ್, ಮುಖಂಡರುಗಳಾದ ಸಂತೋಷ್ ಲಕ್ಕ್ಯಾ, ಹೊನ್ನಪ್ಪ ದಂಟರಮಕ್ಕಿ, ಆರ್.ಶೇಖರ್ ಮತ್ತಿತರರಿದ್ದರು

ಮುಂದಿನ 3 ವರ್ಷಗಳಲ್ಲಿ ಬೆಂಗಳೂರು ದಕ್ಷಿಣ–ಚನ್ನಪಟ್ಟಣ ಚಿತ್ರಣವೇ ಬದಲು: ಡಿಕೆಶಿ

ಬೆಂಗಳೂರು: ಮುಂದಿನ ಮೂರು ವರ್ಷಗಳಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆ (ರಾಮನಗರ) ಹಾಗೂ ಚನ್ನಪಟ್ಟಣದ ಚಿತ್ರಣವೇ ಬದಲಾಗಲಿದೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಹೇಳಿದ್ದಾರೆ.

ಚನ್ನಪಟ್ಟಣ ಉಪಚುನಾವಣೆಯಲ್ಲಿ ಭರ್ಜರಿ ಗೆಲುವಿಗೆ ಕಾರಣರಾದ ಪಕ್ಷದ ಕಾರ್ಯಕರ್ತರು ಮತ್ತು ನಾಯಕರಿಗೆ ಧನ್ಯವಾದ ಹೇಳಲು ಆಯೋಜಿಸಲಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಋಣ ತೀರಿಸುವ ಕಾರ್ಯಕ್ರಮ ಇದು. ನಿಮ್ಮೆಲ್ಲರ ಬೆಂಬಲಕ್ಕೆ ನಾವು ಧನ್ಯವಾದ ಹೇಳಲು ಬಯಸುತ್ತೇವೆ. ನಾಲ್ಕು ಶಾಸಕರನ್ನು ಆಯ್ಕೆ ಮಾಡುವ ಮೂಲಕ ಜಿಲ್ಲೆ ಕಾಂಗ್ರೆಸ್ ಪಕ್ಷವನ್ನು ಬಲಪಡಿಸಿದ್ದೀರಿ. ಇದೀಗ ಅಭಿವೃದ್ಧಿಯ ಮೂಲಕ ಚನ್ನಪಟ್ಟಣ ಮತ್ತು ಬೆಂಗಳೂರು ದಕ್ಷಿಣದ ಚಿತ್ರವನ್ನು ಬದಲಾಯಿಸುತ್ತೇವೆ ಎಂದು ಹೇಳಿದರು.

ಇದೇ ವೇಳೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ್ತು ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಅವರಿಗೆ ಕ್ಷೇತ್ರದ ಜನರು ಸೂಕ್ತ ಉತ್ತರ ನೀಡಿದ್ದಾರೆ ಎಂದು ಹೇಳಿದ ಶಿವಕುಮಾರ್, ನೀವು ಕೇವಲ ಚನ್ನಪಟ್ಟಣಕ್ಕೆ ಮಾತ್ರ ಉತ್ತರ ನೀಡಿಲ್ಲ, ಇಡೀ ದೇಶಕ್ಕೆ ಸಂದೇಶ ರವಾನಿಸಿದ್ದೀರಿಯ. ಚನ್ನಪಟ್ಟಣದ ಜನರನ್ನು ಸುಮ್ಮನೆ ಕೂರಿಸಲು ಸಾಧ್ಯವಿಲ್ಲ ಎಂದು ನೀವು ತೋರಿಸಿದ್ದೀರಿ ಎಂದು ತಿಳಿಸಿದರು.

ಚುನಾವಣೆ ವೇಳೆ ಇಲ್ಲಿ ನಾನೇ ಅಭ್ಯರ್ಥಿ ಎಂದಿದ್ದೆ. ಈಗಲೂ ನಾನೇ ಅಭ್ಯರ್ಥಿ. ಮುಂದಿನ ಒಂದು ವಾರದಲ್ಲಿ ಮತ್ತೆ ಕ್ಷೇತ್ರಕ್ಕೆ ಬಂದು ಕೊಟ್ಟ ಮಾತು ಈಡೇರಿಸುವ ಕೆಲಸದ ಬಗ್ಗೆ ಪರಿಶೀಲಿಸುತ್ತೇನೆ. ಚುನಾವಣೆ ಸಮಯದಲ್ಲಿ ನಾನು ಕುಮಾರಸ್ವಾಮಿ ಅವರಿಗೆ ನೀವು ಶಾಸಕರಾಗಿ, ಮುಖ್ಯಮಂತ್ರಿಯಾಗಿ ಯಾವ ಸಾಧನೆ ಮಾಡಿದ್ದೀರಿ ಎಂದು ಪ್ರಶ್ನಿಸಿದ್ದೆ. ಯೋಗೇಶ್ವರ್ ಅನೇಕ ದೇವಾಲಯ ಕಟ್ಟಿಸಿದ್ದಾರೆ, ನೀವು ಯಾವ ದೇವಾಲಯ ಕಟ್ಟಿದ್ದೀರಿ, ಶಾಲೆಗಾಗಿ ನೀವು 2 ಎಕರೆ ಜಮೀನು ದಾನ ಮಾಡಿದ್ದೀರಾ ಎಂದು ಸವಾಲು ಹಾಕಿದ್ದೆ. ನನ್ನ ಪ್ರಶ್ನೆಗೆ ಅವರಿಂದ ಉತ್ತರವೇ ಬರಲಿಲ್ಲ ಎಂದರು.

ಚುನಾವಣೆ ವೇಳೆ ಅಭಿವೃದ್ಧಿ ಬೇಕೋ, ಕಣ್ಣೀರು ಬೇಕೋ ನಿರ್ಧಾರ ಮಾಡಿ ಎಂದು ನಿಮ್ಮ ಹತ್ತಿರ ಮನವಿ ಮಾಡಿದ್ದೆ. ನೀವು ಅಭಿವೃದ್ಧಿಯನ್ನೇ ಆಯ್ಕೆ ಮಾಡಿದ್ದೀರಿ. ಮುಂದಿನ 3 ವರ್ಷಗಳಲ್ಲಿ ಕ್ಷೇತ್ರದಲ್ಲಿ ಬದಲಾವಣೆ ಮಾಡಲು ರೂಪುರೇಷೆ ಮಾಡಬೇಕಿದೆ. ನಾನು ಆಕಾಶವನ್ನು ಧರೆಗೆ ಇಳಿಸುತ್ತೇನೆ ಎಂದು ಹೇಳುವುದಿಲ್ಲ. ನಿಮ್ಮ ಕಣ್ಣಿಗೆ ಕಾಣುವ ಬದಲಾವಣೆ ತರುತ್ತೇವೆ. ಹಾಲು ಉತ್ಪಾದಕರ ಸಮಸ್ಯೆ ನಮ್ಮ ಗಮನದಲ್ಲಿದೆ. ಸೂಕ್ತ ಕಾಲದಲ್ಲಿ ನಿರ್ಧಾರ ಮಾಡುತ್ತೇವೆ. ನೀವು ಹಣಕ್ಕೆ ಬೆಲೆ ಕೊಡಲಿಲ್ಲ, ಗುಣಕ್ಕೆ ಬೆಲೆ ಕೊಟ್ಟಿದ್ದೀರಿ ಎಂದು ಹೇಳಿದರು.

ಬೆಂಗಳೂರು ಗ್ರಾಮೀಣ ಮಾಜಿ ಸಂಸದ ಮತ್ತು ಶಿವಕುಮಾರ್ ಅವರ ಕಿರಿಯ ಸಹೋದರ ಡಿ.ಕೆ. ಸುರೇಶ್ ಅವರು ಮಾತನಾಡಿ, ರಾಮನಗರದ ನಾಲ್ವರು ಕಾಂಗ್ರೆಸ್ ಶಾಸಕರ ಕಾರ್ಯಕ್ಷಮತೆಯನ್ನು ಸೂಕ್ಷ್ಮವಾಗಿ ಗಮನಿಸುವುದಾಗಿ ಹೇಳಿದರು.

ಜಿಲ್ಲೆಯ ಎಲ್ಲಾ ಶಾಸಕರು ಇದನ್ನು ಸವಾಲಾಗಿ ಸ್ವೀಕರಿಸಿ, ಸರ್ಕಾರ ಯೋಜನೆಗಳನ್ನು ಜನರಿಗೆ ತಲುಪಿಸಬೇಕು. ಕ್ಷೇತ್ರದ ಜನರು ಗ್ಯಾರಂಟಿ ಯೋಜನೆಗಳು ಮತ್ತು ಅಭಿವೃದ್ಧಿಗೆ ಮತ ಹಾಕಿದ್ದಾರೆ. ನಮಗೆ ಈಗಾಗಲೇ 600 ಕೋಟಿ ರೂ. ಅನುದಾನ ಸಿಕ್ಕಿದೆ. ಕೆಲಸಗಳು ಪ್ರಾರಂಭವಾಗಿವೆ ಎಂದು ಹೇಳಿದರು.

ನಾನು ಚನ್ನಪಟ್ಟಣದಿಂದ ಚುನಾವಣೆಯಲ್ಲಿ ಸ್ಪರ್ಧಿಸಲು ಉತ್ಸುಕನಾಗಿದ್ದೆ, ಆದರೆ, ಪಕ್ಷ ಒಪ್ಪಲಿಲ್ಲ. ಕುಟುಂಬಕ್ಕಿಂತ ಪಕ್ಷ ಮುಖ್ಯ ಎಂದು ತೀರ್ಮಾನಿಸಿ, ಯೋಗೇಶ್ವರ್ ಪಕ್ಷ ಹಾಗೂ ನಾಯಕತ್ವ ಒಪ್ಪಿ ಬಂದ ನಂತರ, ನಮ್ಮ ಪಕ್ಷದ ಹಿರಿಯ ನಾಯಕರ ಜತೆ ಚರ್ಚಿಸಿ, ಅಂತಿಮ ತೀರ್ಮಾನ ಮಾಡಿದೆವು. ಈ ಸಂದರ್ಭದಲ್ಲಿ ಕಾರ್ಯಕರ್

ಸಮನ್ವಯ ಪಂಥದ ಹರಿಕಾರರು: ಸಂತರು ತಿಂಥಿಣಿ ಮೌನೇಶ್ವರರು

ಕನ್ನಡ ನಾಡಿನ ಜನ ಸಮೂಹದ ಮನಸ್ಸನ್ನು ತಮ್ಮ ವಿಶಿಷ್ಟ ವ್ಯಕ್ತಿತ್ವ ಹಾಗೂ ಸಾಹಿತ್ಯದ ಮೂಲಕ ಜನರಲ್ಲಿ ಜಾಗೃತಿಯನ್ನುಂಟು ಮಾಡಿ, ಹಿಂದೂ–ಮುಸ್ಲಿಂ ಭಾವೈಕ್ಯತೆ ಬೆಸೆಯುವಲ್ಲಿ ಮಹತ್ವದ ಪಾತ್ರ ವಹಿಸಿದ ಶರಣ, ಸಂತ ಹಾಗೂ ಮಾನವ ಧರ್ಮದ ಪ್ರವಾದಿ ತಿಂಥಿಣಿ ಮೌನೇಶ್ವರರು. ಜನಪರ ವ್ಯಕ್ತಿಯಾಗಿ, ವಚನಕಾರರಾಗಿ ತಮ್ಮ ಕಾಲಜ್ಞಾನ ವಚನಗಳ ಮೂಲಕ ಕಾಯಕ, ಸಮಾನತೆ, ಸಹೋದರತ್ವ, ಏಕದೇವೋಪಾಸನೆ, ಸರಳತೆ ಹಾಗೂ ಸದಾಚಾರ ಮುಂತಾದ ಲೋಕೋತ್ತರ ತತ್ವಗಳನ್ನು ದೇಶಪರ್ಯಟನೆಯಿಂದ ನೀತಿಬೋಧನೆ ಮಾಡಿ ಅವರಲ್ಲಿ ಧೈರ್ಯ–ಸ್ಥೈರ್ಯ ತುಂಬಿದ ಮೋನಪ್ಪಯ್ಯ 12ನೇ ಶತಮಾನದ ಶಿವಶರಣರ ತತ್ವ ಹಾಗೂ ಸೂಫಿಸಂತರ ತತ್ವಗಳನ್ನು ಸಮೀಕರಿಸಿಕೊಂಡು ತನ್ನದೇ ಆದ ?ಸಮನ್ವಯ ಪಂಥ? ವನ್ನು ರೂಪಿಸಿಕೊಂಡಿದ್ದು ವಿಶೇಷ. ಅವರ ವಚನಗಳ ತಾಪ್ತಿಕ, ಸಾಹಿತ್ಯಿಕ ಹಾಗೂ ಸಾಂಸ್ಕೃತಿಕ ಮುಖಗಳನ್ನು ಗಮನಿಸಿದಾಗ ಅವರೊಬ್ಬ ಮಧ್ಯ ಕಾಲಿನ ಕರ್ನಾಟಕದ ಮಹಾಪುರುಷ. ಹೀಗಾಗಿ ಸಮಾಜದ ಜನತೆಯ ಮೇಲೆ ಅವರು ದಟ್ಟವಾಗಿ ಬೀರಿದ ಧಾರ್ಮಿಕ, ಸಾಂಸ್ಕೃತಿಕ ಪ್ರಭಾವಗಳ ಅರಿವು ಸ್ಪಷ್ಟವಾಗಿ ತಿಳಿಯಬಹುದು.

ತಿಂಥಿಣಿ ಮೌನೇಶ್ವರರ ಹಿನ್ನಲೆ:

ಮೌನೇಶ್ವರರು ಸಗರನಾಡಿನ, ಸುರಪುರ ತಾಲ್ಲೂಕು, ?ಗೋನಾಳಗ್ರಾಮ?ದಲ್ಲಿ ಕ್ರಿ.ಶ. 1570 ರಲ್ಲಿ ಜನಿಸಿದರು. ತಂದೆ ಹಾವಪ್ಪ, ತಾಯಿ ಹಾವಮ್ಮ. ಮೌನೇಶ್ವರ, ಮೋನಯ್ಯ, ಮೋನಪ್ಪ, ಮೋನಪ್ಪಯ್ಯ, ಮೌನಲಿಂಗ, ಮಾನಪ್ಪ, ಮಾನಯ್ಯ, ಮೌನುದ್ದೀನ, ಎಂದು ಕರೆಯಿಸಿಕೊಳ್ಳುವ ಇವರ ನಿಜನಾಮವೇನಿರಬೇಕು? ?ಮೌನ? ಎಂಬುದು ಅಂಕಿತನಾಮವೆ? ಅನ್ವರ್ಥಕನಾಮವೇ? ಇಂಥ ಹಲವು ಪ್ರಶ್ನೆಗಳಿವೆ. ?ಮೋನ? ಎಂಬುದು ಸಂಸ್ಕೃತದ ?ಮೌನ? ಆಗಿದೆ. ಹಳ್ಳಿಯಲ್ಲಿ ಮಾನಪ್ಪ ಹೆಸರು ಬಳಕೆಯಲ್ಲಿದೆ. ಮೋನಪ್ಪ ಯೋಗಿಯಾಗಿ ಬೆಳೆದು, ಮಾತು ಮಿತವಾದಾಗ ಅವರನ್ನು ಗಮನಿಸಿ, ಮೂಲತಃ ಇದ್ದ ?ಮಾನಪ್ಪ? ಎಂಬುದರ ಬದಲು ?ಮೌನಪ್ಪ? ಎಂಬ ಅನ್ವರ್ಥಕ ನಾಮವನ್ನು ಜನತೆ ಬಳಸಿರಬೇಕು. ಕಾವ್ಯ ಮತ್ತು ವಚನಗಳಲ್ಲಿ ?ಮೋನಪ್ಪ? ಪದವೇ ಬಳಕೆಯಾಗಿದೆ. ಮುಂದೆ ?ಈಶ್ವರ? ನೆಂಬ ಗೌರವವಾಚಿಪದ ಸೇರುವಲ್ಲಿ ?ಮೌನೇಶ್ವರ? ರೂಪ ಸಿದ್ಧಗೊಂಡಿರುತ್ತದೆ. ಹುಟ್ಟಿದಾಗ ಇಟ್ಟ ಹೆಸರು ಮಾನಪ್ಪ (ರೂಢಿಯ ಹೆಸರು ಮೋನಪ್ಪ) ಮಹಾತ್ಮನಾಗಿ ಬೆಳೆದಾಗ ರೂಢಿಗೊಂಡ ಹೆಸರು ಮಾನಪ್ಪ+ ಅಯ್ಯ = ಮಾನಪ್ಪಯ್ಯ (ಮೋನಪ್ಪಯ್ಯ) ಆಗಿದೆ. ಅರ್ಕಸಾಲಿ, ಪಂಚಬ್ರಹ್ಮ ಪಂಚಾನನರ, ಕುಲದಲ್ಲಿ ತಾನು ಹುಟ್ಟಿ ಬಂದಿರುವುದಾಗಿ ತಮ್ಮ ವಚನದಲ್ಲಿ ಹೇಳಿಕೊಂಡಿದ್ದಾರೆ. ತಮ್ಮ ಕಾಯಕದೊಂದಿಗೆ, ಆಧ್ಯಾತ್ಮಿಕತೆಯನ್ನು ಅನುಸಂದಾನಗೊಳಿಸಿದ್ದಾರೆ.

ಪ್ರಭಾವ, ಪ್ರೇರಣೆ, ಸಾಹಿತ್ಯ ಕೃತಿಗಳು: ವಿಶ್ವೌನೀಶ್ವರಿಗ 12ನೇ ಶತಮಾನದ ಶಿವಶರಣರ ಪ್ರಭಾವ, ಸೂಫಿಸಂತರ ತತ್ವವನ್ನು ಅಳವಡಿಸಿಕೊಂಡು ?ಸಮನ್ವಯ ಪಂಥದ? ಹರಿಕಾರನಾಗಿ ಹಿಂದೂ–ಮುಸ್ಲಿಂ ಭಾವೈಕ್ಯತೆಗಾಗಿ ಶ್ರಮಿಸಿದರು. ಇವರದು ಶಿಷ್ಟಪದ, ಜನಪದ ಸಾಹಿತ್ಯ 1929 ರಿಂದ 1987ರ ವರೆಗೆ 20ಕ್ಕೂ ಹೆಚ್ಚು ಶಿಷ್ಟ ಸಾಹಿತ್ಯದಲ್ಲಿ ಮೌನೇಶ್ವರರನ್ನು ಕುರಿತಾಗಿ ಕೃತಿಗಳು ಪ್ರಕಟಗೊಂಡಿವೆ. ಜನಪದ ಸಾಹಿತ್ಯದಲ್ಲಿ ವಿಪುಲವಾದ ಸಾಹಿತ್ಯ ಸೃಷ್ಟಿಯಾಗಿದೆ. ಶರಣ, ಸಂತ, ಸನ್ಯಾಸಿ, ಫಕೀರ, ಪೀರ, ಅಲ್ಲಮ, ಶಿವ, ಬ್ರಹ್ಮ, ವಿಶ್ವಕರ್ಮ, ಜಗದ್ಗುರು ಹೀಗೆ ವಿವಿಧ ಸ್ವರೂಪದಲ್ಲಿ ಕಾಣುವ ಜನ ಮೌನೇಶ್ವರರನ್ನು ಹಾಡಿ ಹೊಗಳಿದ್ದಾರೆ. ಮುಕ್ತಕ (ತ್ರಿಪದಿ) ಪುರವಂತರಹಾಡು, ಕೋಲುಪದ, ಮೊಹರಂಹಾಡು, ಆರತಿಪದ, ಭಜನೆಹಾಡು, ಜೋಗುಳಹಾಡು, ಡೊಳ್ಳಿನಪದ, ಹಾಗೂ ಜನಪದ ಸುಪ್ರಭಾತ ಹೀಗೆ ಹತ್ತು ಹಲವು ಪ್ರಕಾರಗಳಲ್ಲಿ ಜನಪದ ಗೀತ ಸಾಹಿತ್ಯ ಮೈದಾಳಿರುತ್ತದೆ.

ಮೌನೇಶ್ವರರ ದೇಶಪರ್ಯಟನೆ: ಮೋನಪ್ಪಂಯ್ಯನ'ದ ಚರವ್ಯಕ್ತಿತ್ವ, ಅಲ್ಲಮಪ್ರಭು, ಸರ್ವಜ್ಞನಂತೆ ಲೋಕಸಂಚಾರಿ. ಸಂಚಾರದ ಉದ್ದೇಶ ಆತ್ಮಕಲ್ಯಾಣ ಮತ್ತು ಲೋಕಕಲ್ಯಾಣ. ಫೀರ ಫಕೀರನಾಗಿ, ವೀರವಿರಕ್ತನಾಗಿ ಕಂಗೊಳಿಸಿ ಅಲ್ಲಲ್ಲಿಯ ಘಟನೆಗಳಿಗೆ ಸ್ಪಂದಿಸಿ ಮಾನವೀಯತೆ ಮೆರೆದ ಕುರಿತು ಕಾವ್ಯಗಳು ತಿಳಿಸುತ್ತವೆ. ಮೋನಪ್ಪಯ್ಯ ಹುಟ್ಟಿದ್ದು ಗೋನಾಳ, ಐಕ್ಯನಾದದ್ದು ತಿಂಥಿಣಿಯಾದ್ರು, ಲಿಂಗನಬಂಡಿ, ವರವಿಗ್ರಾಮಗಳು. ಇವರ ದರ್ಶನದಿಂದ ಪುಣ್ಯಕ್ಷೇತ್ರಗಳಾಗಿವೆ. ಈ ನಾಲ್ಕು ಸ್ಥಳಗಳಲ್ಲಿ ಮೌನೇಶ್ವರನ ಹೆಸರಿನಲ್ಲಿ ಕಟ್ಟಿಸಿದ ದೇವಾಲಯಗಳಿವೆ. ಅಲ್ಲಿ ಆರಾಧನೆ, ಜಾತ್ರೆ, ಉತ್ಸವಗಳು ನೆಡೆಯುತ್ತಿವೆ. ಕಾಶಿ, ರಾಯಚೋಟ, ಹಂಪೆ, ದೇವದುರ್ಗ, ಕನಕಗಿರಿ, ಆನೆಗುಂದಿ, ಯಲಬುರ್ಗ, ರಾಯಚೂರು, ಬಂಕಾಪುರ, ಶಿರಸಂಗಿ, ಲಕ್ಷ್ಮೇಶ್ವರ, ಬಸವಾಪಟ್ಟಣ, ಲಿಂಗನಬಂಡಿ, ವಜ್ರುದಬಂಡಿ, ವರವಿ, ಛಬ್ಬಿ, ಶಿರಹಟ್ಟಿ, ಗದಗ, ಉಳವಿ, ವಿಜಾಪೂರ, ಸಗರ, ಶಹಾಪುರ, ಗೋಗಿ, ಉಕ್ಕಲಿ, ಧುತ್ತರಗಾಂವ್, ಬಿದುರುಕೆರೆ, ಕಲ್ಯಾಣ, ಮುಂತಾದ ಸ್ಥಳ ಸಂದರ್ಶಿಸಿದ ಉಲ್ಲೇಖ

ವಚನಗಳಲ್ಲಿವೆ.

ವಚನಕಾರರ ಪರಂಪರೆಯ ಮೋನಪ್ಪಯ್ಯ:

ಸಾಹಿತ್ಯಿಕವಾಗಿ ವಚನಕಾರರ ಹಾಗೂ ಸರ್ವಜ್ಞನ ಪರಂಪರೆಯವರೆಂದು ಗುರುತಿಸಲು ಸಾಧ್ಯವಿದೆ. 12ನೇ ಶತಮಾನದ ಶಿವಶರಣರ ಜೀವನ, ವಚನಗಳು ಇವರ ಮೇಲೆ ಗಾಢವಾದ ಪ್ರಭಾವ ಬೀರಿದೆ. ಅವರ ಸಾಹಿತ್ಯ ಕೃಷಿಯೆಲ್ಲವೂ ತ್ರಿಪದಿ (ಮುಕ್ತಕಗಳು) ಹಾಗೂ ವಚನ ರಚನೆಯೇ ಆಗಿದೆ. ಮೋನಪ್ಪಯ್ಯ ತಮ್ಮ ವಚನಗಳಿಗೆ ?ಬಸವಣ್ಣ? ಎಂಬ ಅಂಕಿತವಿದೆ. ಜನಪದ ಭಾಷೆ, ಆಡು ಭಾಷೆಯನ್ನೇ ಬಳಸಿದ್ದಾರೆ. ವಚನ ರಚನೆಯ ಗುರಿ ಸಮಾಜದ ಸ್ವಾಸ್ಥ್ಯವನ್ನು ಕಾಪಾಡುವುದು. ಮೋನಪ್ಪಯ್ಯನ ಆಲೋಚನೆ, ಅಭಿವ್ಯಕ್ತಿ ಸಮಾನಗುಣ ಧರ್ಮದಲ್ಲಿ ಭಾಷೆ, ವಚನ ಶಿಲ್ಪಗಳಲ್ಲಿ ಸಾಕಷ್ಟು ಸಾಮ್ಯತೆಗಳಿವೆ. ಸಮಾಜದ ವಿಡಂಬನೆ, ಚತುರೋಕ್ತಿಯಲ್ಲಿ ಆಕೃತಿಯಲ್ಲಿ ಭಿನ್ನತೆ ಕಂಡರೂ ಆಶಯದಲ್ಲಿ ಏಕತೆ ಇದೆ. ಮೋನಪ್ಪಯ್ಯ ಅಪಾರ ಸಂಖ್ಯೆಯ ಭಕ್ತರಿಂದ ಆರಾಧಿಸಿಕೊಳ್ಳುವ ದೈವ. ಇವರ ಸಮಾಜ ಶುದ್ಧೀಕರಣ ಪ್ರವೃತ್ತಿಯೇ ಕಾರಣವಾಗಿರಬೇಕು. ಮೋನಪ್ಪಯ್ಯನಿಗೆ ದೇವತ್ವದ ಪಟ್ಟ ದೊರೆಯಿತು. ಸರ್ವಜ್ಞನಿಗೆ ದೊರೆಯಲಿಲ್ಲ. ಪ್ರಭುತ್ವವನ್ನು ನೇರವಾಗಿ ಖಂಡಿಸಿದರೂ ಮೋನಪ್ಪಯ್ಯ ಪ್ರಭುವರ್ಗಕ್ಕೆ ಪಾತ್ರರಾಗಿ ಅವರಿಂದ ಪೂಜಿಸಿಕೊಂಡರು.

ವಚನ ರೂಪ, ತತ್ವ, ಸಮಾಜದರ್ಶನ: ಅನುಭಾವಿಗಳಿಗೆ ಅಕ್ಷರವಿದ್ದಿಗಿಂತ ಆಧ್ಯಾತ್ಮವಿದ್ದೆ ಹಿರಿದಾದುದು. ತಾನು ಅಕ್ಷರ ವಿದ್ಯೆ ಹೊಂದಿಲ್ಲವೆಂದು ಮೋನಪ್ಪಯ್ಯ ಹೇಳಿಕೊಂಡಿದ್ದಾನೆ. ಹಾಗಾದರೆ ಆತನ ವಚನಗಳು ಹೇಗೆ ರಚನೆಯಾದವು? ಅವರ ವಚನವಾಣಿಯನ್ನು ಆತನ ಭಕ್ತರು ಬರೆದಿಟ್ಟು ಕೊಂಡಿರಬೇಕು. ಹೀಗೆ ಬರೆದಿಟ್ಟುಕೊಳ್ಳುವ ಪದ್ಧತಿ ಕುರುಬಹೇಳಿಕೆ (ದೇವರಹೇಳಿಕೆ) ಗಳ ಸಂದರ್ಭದಲ್ಲಿ ಈಗಲೂ ಕಾಣಬಹುದು. ಮೋನಪ್ಪಯ್ಯನ ವಚನ, ಮೂರು, ನಾಲ್ಕು, ಐದು ಹಾಗೂ ಆರು ಸಾಲುಗಳ ತ್ರಿಪದಿಯಲ್ಲಿಯೇ ಇವೆ. ಧಾರ್ಮಿಕ ಸಮನ್ವಯ ತತ್ವ ಸಾರುತ್ತ, ಜನಪರ ಕಾಳಜಿಗೆ ವಚನಗಳನ್ನು ಅಭಿವ್ಯಕ್ತಿಯಾಗಿ ಬಳಸಿಕೊಂಡು ಸಮಾಜದ ಓರೆ–ಕೋರೆಗಳ ವಿಮರ್ಶೆ, ನೀತಿ, ನಿಜವಾದ ಧರ್ಮದ ನೆಲೆಗಟ್ಟು, ಸಮಾಜಕಟ್ಟುವ ಕೆಲಸ ಆತನದು. ವಚನಗಳಲ್ಲಿ ಜೀವಾತ್ಮ–ಪರಮಾತ್ಮ, ಅದ್ವೈತ, ಜಂಗಮತತ್ವ, ಏಕೋದೇವಾಪಾಸನೆ, ವೇದ, ಶಾಸ್ತ್ರ, ಪುರಾಣ, ಜಪ, ತಪ, ಶೀಲ, ಮಳೆ, ಬೆಳೆ, ಇಳೆ, ಅರಸು–ಅರಸೊತ್ತಿಗೆ, ಹೆಣ್ಣು–ಹೇಮ, ಮೂಢನಂಬಿಕೆಗಳ ಖಂಡನೆ, ಜಾತಿವ್ಯವಸ್ಥೆ, ಸಮಾನತೆ, ಜೀವದಯೆ ನೀತಿಬೋಧೆ, ಸರಳತೆ, ಸದಾಚಾರ ಮುಂತಾದ ಸಂಗತಿಗಳ ಕುರಿತು ಹಂಬಲ–ಕಾಳಜಿಗಳನ್ನು ಅವರ ವಚನಗಳಲ್ಲಿ ಕಾಣಬಹುದು.

ಜಾತ್ರೆ, ಆರಾಧನೆ, ಆಚರಣೆಗಳು: ಮೋನಪ್ಪಯ್ಯ ಹೆಸರಿನ ಮಠ–ಮಂದಿರಗಳು ಹುಟ್ಟಿಕೊಂಡಿವೆ. ಮಠಗಳು ಮೋನಪ್ಪಯ್ಯನ ಜಯಂತಿ, ಉತ್ಸವ, ಭಜನೆ ಹಾಗೂ ದಾಸೋಹವನ್ನು ನಡೆಸಿದರೆ. ಮಂದಿರಗಳು ಜಾತ್ರೆ–ಉತ್ಸವಗಳನ್ನು ನಡೆಸಿಕೊಂಡು ಬರುತ್ತವೆ. ಇವರ ಜೀವಂತ ಸಮಾಧಿಯೇ ತಿಂಥಿಣಿಯಲ್ಲಿ ಮಂದಿರವಾಗಿದೆ. ಇತರೇ ಮಂದಿರ–ಮಠಗಳು ಆತನ ಪುಣ್ಯನಾಮವನ್ನು ಹೊತ್ತು ದರ್ಶನ ಭಾಗ್ಯವನ್ನು ಸಾರುವ ಪುಣ್ಯಸ್ಮಾರಕಗಳಾಗಿವೆ. ರಾಜ್ಯಾದ್ಯಂತ ಸಾಕಷ್ಟು ಮಠ–ಮಂದಿರಗಳು ಸ್ಥಾಪನೆಯಾದರೂ ಪ್ರಮುಖವಾದವುಗಳೆಂದರೆ ಗೋನಾಳ, ಲಿಂಗನಬಂಡಿ, ವರವಿ ಹಾಗೂ ತಿಂಥಿಣಿ ದೇವಾಲಯಗಳು. ಇವು ಹಿಂದೂ–ಮುಸ್ಲಿಂ ಸಮನ್ವಯ ಶೈಲಿಯ ವಾಸ್ತುಶಿಲ್ಪ ಹಾಗೂ ಏಕರೂಪದ ಆರಾಧನೆಯನ್ನು, ಧರ್ಮಸಮನ್ವಯವನ್ನು ಸಾರುತ್ತಲಿವೆ. ಗದ್ದನಕೇರಿ, ಸಿರಸಂಗಿ, ಕೊಣ್ಣೂರು, ಸವದತ್ತಿ, ಬೈಲಹೊಂಗಲ, ಬೆಳಗಾವಿ, ಹುಬ್ಬಳ್ಳಿ, ಕೊಪ್ಪಳ, ಹುಲಗೂರ, ಮಸ್ಕಿ, ಶಹಾಪುರ, ಅಳ್ಳೋಳ್ಳಿ ಹೀಗೆ (ನಾಡಿನಲ್ಲಿ 15ಕ್ಕೂ ಹೆಚ್ಚು) ಮೌನೇಶ್ವರರ ಮಠಗಳಿವೆ. ಒಟ್ಟಾರೆ ಸಂತನಾಗಿ, ನಾಡಿನ ಭಕ್ತಿ ಪರಂಪರೆಯ ಹರಿಕಾರಾದ ಶಿವಶರಣರು ಮತ್ತು ಹರಿದಾಸರಿಗಿಂತಲೂ ಹೆಚ್ಚಿನ ಜನಪ್ರಿಯತೆ ಗಮನಿಸಿದಾಗ ಮೋನಪ್ಪಯ್ಯನ ಪ್ರಭಾವವಲಯದ ?ಹರವು? ಗೊತ್ತಾಗುತ್ತದೆ. ಸಮನ್ವಯ ಪಂಥದ ಹರಿಕಾರನಾದ ಮೌನೇಶ್ವರರ ತತ್ವಗಳು ಪ್ರಸ್ತುತ ಸಂದರ್ಭದಲ್ಲಿ ತುಂಬಾ ಅಗತ್ಯ ಮತ್ತು ಅವಶ್ಯಕತೆವೆನಿಸಿವೆ. ಫೆಬ್ರುವರಿ 7ರಂದು ಅವರ ಜಾತ್ರೆ ಪ್ರಯುಕ್ತ ಅವರನ್ನು ಸ್ಮರಿಸುವುದು ನನ್ನ ಲೇಖನದ ಆಶಯವಾಗಿದೆ.

ಡಾ. ಗಂಗಾಧರಯ್ಯ ಹಿರೇಮಠ
ವಿಶ್ರಾಂತ ಪ್ರಾಧ್ಯಾಪಕರು
ಮೊ: 9880093613

ಎಂಬಿಎ : ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ 3 ರ್‍ಯಾಂಕ್

ದಾವಣಗೆರೆ: ನಗರದ ಪ್ರತಿಷ್ಠಿತ ಸರ್ಕಾರಿ ಕಾಲೇಜಿನ ಸ್ನಾತಕೋತ್ತರ ನಿರ್ವಹಣಾ ಶಾಸ್ತ್ರ (ಎಂ ಬಿ ಎ) ವಿಭಾಗದ ವಿದ್ಯಾರ್ಥಿಗಳು ದಾವಣಗೆರೆ ವಿಶ್ವವಿದ್ಯಾನಿಲಯದ 2023–24 ಸಾಲಿನ ಸೆಪ್ಟಂಬರ್ ನಲ್ಲಿ ನಡೆದ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿ ಅತಿ ಹೆಚ್ಚು ಅಂಕಗಳನ್ನು ಪಡೆದು ಅತ್ಯುನ್ನತ ಶ್ರೇಣಿಯನ್ನು ಪಡೆದಿರುತ್ತಾರೆ. ಕಾಲೇಜಿನ ವಿದ್ಯಾರ್ಥಿಗಳಾದ ಬಿ ಹಾಲ ಶಂಕರ್ ಮತ್ತು ರಶ್ಮಿ ಎಸ್ ನಾಯ್ಕ 9 ನೆ ಸ್ಥಾನ ಹಾಗೂ ಬಿಂದು ಜಿ ಎಸ್ 10 ನೇ ಸ್ಥಾನವನ್ನು ಪಡೆದು ಕಾಲೇಜಿಗೆ ಕೀರ್ತಿಯನ್ನು ತಂದಿರುತ್ತಾರೆ. ಉತ್ತಮ ಅಂಕ ಗಳಿಸಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳಿಗೆ ಕಾಲೇಜಿನ ಪ್ರಾಂಶುಪಾಲರಾದ ಪ್ರೊ ಬಿ ಸಿ ತಹಸಿಲ್ದಾರ್, ವಿಭಾಗದ ಮುಖ್ಯಸ್ಥರಾದ ಡಾ ವೆಂಕಟೇಶ್ ಬಾಬು ಎಸ್, ಅಧ್ಯಾಪಕರಾದ ಪ್ರೊ ವಿನಾಯಕ್ ಡಾ ಪ್ರಭಾಕರ್ ಪ್ರೊ ಪ್ರತಿಭಾ ಪ್ರೊ ನಾಗರಾಜ್ ಪ್ರೊ ರಾಧ ಹಾಗೂ ಅಧೀಕ್ಷಕರಾದ ಶ್ರೀಮತಿ ಪ್ರತಿಭಾ ಕಾಲೇಜಿನ ಎಲ್ಲ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯವರು ಅಭಿನಂದನೆ ತಿಳಿಸಿದ್ದಾರೆ

ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರ ಗಮನಕ್ಕೆ

ಗದಗ: ಗದಗ ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿರುವ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಹಾಗೂ ಉದ್ದಿಮೆದಾರರು ಈಗಾಗಲೇ ತಮ್ಮ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳನ್ನು ಕಾರ್ಮಿಕ ನಿರೀಕ್ಷಕರ ಕಛೇರಿ ಗದಗ 2ನೇ ವೃತ್ತ, ಇಲ್ಲಿ ನೋಂದಣಿ ಮಾಡಿಸಿಕೊಂಡ ಸಂಸ್ಥೆಗಳನ್ನು ಹೊರತುಪಡಿಸಿ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಕಾರ್ಮಿಕರು ಇರುವ ಹಾಗೂ ಕಾರ್ಮಿಕರು ಇಲ್ಲದೇ ಇರುವ ಸಂಸ್ಥೆಗಳು ಸಹ ಕರ್ನಾಟಕ ಸರ್ಕಾರದ ಇ–ಕಾರ್ಮಿಕ ತಂತ್ರಾಂಶದಲ್ಲಿ https://www.ekarmika.karnataka.gov.in/ekarmika/Static/Homeನಿಗಧಿತ ಆನ್–ಲೈನ್ ಮೂಲಕ ಶುಲ್ಕವನ್ನು ಮತ್ತು ಅವಶ್ಯಕ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಿ ಸಂಸ್ಥೆಗಳ ನೋಂದಣಿ ಪತ್ರ ಪಡೆದುಕೊಳ್ಳಬೇಕೆಂದು ಗದಗ ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಹಾಗೂ ಉದ್ದಿಮೆದಾರರಿಗೆ ತಿಳಿಸಲಾಗಿದ್ದ ತಪ್ಪಿದ್ದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಕಾರ್ಮಿಕ ನಿರೀಕ್ಷಕ ಉಮೇಶ್ ಎಸ್ ಹುಲ್ಲಣ್ಣವರ ಪ್ರಕಟಣೆ ತಿಳಿಸಿರುತ್ತಾರೆ.

ಇಂದು ಸಾಮಾನ್ಯ ಸಭೆ

ಹಾಸನ : ಹಾನಸ ನಗರಸಭೆಯ ರಾಷ್ಟ್ರಕವಿ ಕುವೆಂಪು ಸಭಾಂಗಣ ದಲ್ಲಿ ನಗರಸಭೆಯ ಅಧ್ಯಕ್ಷರಾದ ಚಂದ್ರೇಗೌಡ.ಎಂ. ರವರ ಅಧ್ಯಕ್ಷತೆಯಲ್ಲಿಇಂದು ಪೂರ್ವಾಹ್ನ 12.30 ಗಂಟೆಗೆ ಸಾಮಾನ್ಯ ಸಭೆಯನ್ನು ಕರೆಯಲಾಗಿದೆ ಎಂದು ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

ಏಡ್ಸ್ ರೋಗಿಗಳನ್ನು ಅಪರಾಧ ದೃಷ್ಟಿಯಿಂದ ನೋಡದೇ ಸಮಾನವಾಗಿ ಕಾಣಿರಿ

ದಾವಣಗೆರೆ: ಏಡ್ಸ್ ರೋಗಿಯನ್ನು ಅಪರಾಧಿ ದೃಷ್ಟಿಯಿಂದ ನೋಡದೇ ಸಮಾನವಾಗಿ ಕಾಣುವುದರಿಂದ ಆತ್ಮಸ್ಥೈರ್ಯ ಹೆಚ್ಚಲಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ತಿಳಿಸಿದರು.

ಬುಧವಾರ(ಫೆ.5)ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ ಹಾಗೂ ವಿವಿಧ ಇಲಾಖೆಗಳಿಂದ ಆಯೋಜಿಸಲಾಗಿದ್ದ ವಿವಿಧ ಇಲಾಖಾ ಮುಖ್ಯಸ್ಥರ ಸಮನ್ವಯ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಳೆದ ಹತ್ತು ವರ್ಷಗಳಲ್ಲಿ ಜಿಲ್ಲೆಯಲ್ಲಿ 0.5 ಎಚ್ಐವಿ ಸೋಂಕು ಪ್ರಕರಣಗಳು ಇಳಿಕೆಯಾಗಿದೆ. ಇದೇ ಅವಧಿಯಲ್ಲಿ ತಾಯಿಯಿಂದ ಮಗುವಿಗೆ ಎಚ್ಐವಿ ಸೋಂಕು ವರ್ಗವಾಗುವ ಪ್ರಮಾಣ ಕಡಿಮೆಯಾಗಿದೆ. ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಇಲಾಖೆಗಳಲ್ಲಿ ದೊರೆಯುವ ಸೌಲಭ್ಯಗಳನ್ನು ಹೆಚ್.ಐ.ವಿ ಸೋಂಕಿತರಿಗೆ ನೀಡಲು ಮತ್ತು ತಾರತಮ್ಯವಾಗದಂತೆ ಮುಂಜಾಗ್ರತೆ ಕ್ರಮವಹಿಸಬೇಕು ಎಂದರು.

ಹವಾಮಾನ ಬದಲಾವಣೆ ಕುರಿತು ಮಾತನಾಡಿದ ಅವರು ಜಗಳೂರಿನಲ್ಲಿ ಬೆಂಕಿ ಅನಾಹುತಗಳು ತುಂಬಾ ಸಂಭವಿಸುತ್ತಿದ್ದು, ಇದಕ್ಕೆ ಎನ್‌ಜಿಟಿ ಗೈಡ್‌ಲೈನ್ಸ್ ಪ್ರಕಾರ ಅವರಿಗೆ ಮಾರ್ಗದರ್ಶನ ನೀಡಬೇಕು. ರಸ್ತೆಗಳಲ್ಲಿ ಹುಲ್ಲಿನ ಲಾರಿಯ ಮೇಲೆ ಬೆಂಕಿ ಅವಘಡ ಸಂಭವಿಸುತ್ತಿದೆ, ಇದನ್ನು ತಡೆಯಬೇಕು. ಪ್ಲಾಸ್ಟಿಕ್ ಬಳಕೆ ನಿಷಧ ಮಾಡಬೇಕು. ವಿವಿಧ

ಇಲಾಖೆಗಳ ಜೊತೆಗೂಡಿ ಸಂಪೂರ್ಣವಾಗಿ ಪ್ಲಾಸ್ಟಿಕ್ ಬಳಕೆ ತಡೆಗಟ್ಟಲು ಶ್ರಮಿಸಬೇಕು ಎಂದರು.

ಡಾ.ಕೃತಿ ಹೆಚ್ಐವಿ ನಿಯಂತ್ರಣ ಕುರಿತು ಮಾಹಿತಿ ನೀಡಿ ಹೆಚ್.ಐ.ವಿ ಆಪ್ತ ಸಮಾಲೋಚನೆ ನಡೆಸಿ ಎ.ಆರ್.ಟಿ ಔಷಧೋಪಚಾರವನ್ನು ಮಾಡಲಾಗುವುದು, ಡಾಟ್ ಟಿ.ಬಿ.ಚಿಕಿತ್ಸೆ, ಸಿ.ಪಿ.ಟಿ ಔಷಧೋಪಾಚಾರ, ಸಮಯ ಸಾಧಕಗಳಿಗೆ, ಸೋಂಕುಗಳಿಗೆ ಚಿಕಿತ್ಸೆ, ನಿರೋಧ್, ಐ.ಇ.ಸಿ ಪೊ?ಸ್ಟರ್ ಮತ್ತು ಕರಪತ್ರಗಳನ್ನು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ

ರಾಜ್ಯ ಒಲಂಪಿಕ್ ಕ್ರೀಡಾಕೂಟದಲ್ಲಿ ನಿವೇದಿತಾಗೆ ಚಿನ್ನ, ಸಮೃದ್‌ಗೆ ಕಂಚು

ಶಿವಮೊಗ್ಗ: ಉಡುಪಿಯ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಕರ್ನಾಟಕ ರಾಜ್ಯ ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಶಿವಮೊಗ್ಗ ಜಿಲ್ಲೆಯಿಂದ ಪ್ರತಿನಿಧಿಸಿದ್ದ ಜಿಲ್ಲಾ ಅಮೆಚುರ್ ಬಾಕ್ಸಿಂಗ್ ಅಸೋಸಿಯೇಷನ್ ಕ್ರೀಡಾಪಟುಗಳಾದ ನಿವೇದಿತಾ ಆರ್. ಇವರು 65 ರಿಂದ 70 ಕೆಜಿ ತೂಕದ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ಹಾಗೂ ಸಮೃದ್ 60 ರಿಂದ 65 ಕೆಜಿ ತೂಕದ ವಿಭಾಗದಲ್ಲಿ ಭಾಗವಹಿಸಿ ಕಂಚಿನ ಪದಕ ಪಡೆದು–ಕೊಂಡಿದ್ದಾರೆ ಎಂದು ಶಿವಮೊಗ್ಗ ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷ ಯೋಗೀಶ್ ತಿಳಿಸಿದರು. ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಸರ್ಕಾರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲಾ ಕ್ರೀಡಾಂಗಣದಲ್ಲಿ ಕರ್ನಾಟಕ ಒಲಂಪಿಕ್ ಸಹಯೋಗದಲ್ಲಿ ನಡೆದ ಕ್ರೀಡಾಕೂಟದಲ್ಲಿ ಮೀನಾಕ್ಷಿ ಭವನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ನಿವೇದಿತಾ ಆರ್. ಹಾಗೂ ಶಿವಮೊಗ್ಗದ ವಿದ್ಯಾಭಾರತಿ ಕಾಲೇಜಿನ ವಿದ್ಯಾರ್ಥಿ ಸಮೃದ್ ಇದೇ ಮೊದಲ ಬಾರಿಗೆ ಶಿವಮೊಗ್ಗ ಜಿಲ್ಲೆಗೆ ಪ್ರಶಸ್ತಿ ತಂದಿದ್ದಾರೆ. ಈ ಇಬ್ಬರು ಜಿಲ್ಲೆಗೆ ಕ್ರೀಡಾ ವಿಭಾಗದಲ್ಲಿ ಕೀರ್ತಿ ತಂದಿದ್ದು, ಈ ಇಬ್ಬರು ಶಿವಮೊಗ್ಗದ ಬಾಕ್ಸಿಂಗ್ ಕೋಚ್ ಮೀನಾಕ್ಷಿಯವರ ಬಳಿ ತರಬೇತಿ ಪಡೆದಿದ್ದಾರೆ ಎಂದರು.ವಿಜೇತ ಕ್ರೀಡಾಪಟುಗಳಿಗೆ ಜಿಲ್ಲಾ ಅಮೆಚೂರ್ ಬಾಕ್ಸಿಂಗ್ ಅಸೋಸಿಯೇಷನ್ ಅಧ್ಯಕ್ಷ ಶಿವಮೊಗ್ಗ ವಿನೋದ್ ಸೇರಿದಂತೆ ಪೋಷಕರು ಹಾಗೂ ಕಾಲೇಜಿನ ಆಡಳಿತ ಮಂಡಳಿ ಅಭಿನಂದನೆ ಸಲ್ಲಿಸಿದ್ದಾರೆ. ಚಿನ್ನದ ಪದಕ ಪಡೆದಿರುವ ನಿವೇದಿತ ಆರ್. ಮಾತನಾಡಿ, ಇದು ನನ್ನ ಶ್ರಮಕ್ಕೆ ಸಿಕ್ಕ ಪ್ರತಿಫಲವಾಗಿದೆ. ರಾಜ್ಯಮಟ್ಟದಲ್ಲಿ ಉತ್ತಮ ರೀತಿಯಲ್ಲಿ ಆಟ ಆಡಿದ್ದೇನೆ. ಅದೇ ರೀತಿ ರಾಷ್ಟ್ರಮಟ್ಟದಲ್ಲಿ ಆಡಿ, ನನ್ನ ತಂದೆಗೆ ಒಳ್ಳೆಯ ಹೆಸರು ತರಬೇಕೆಂದಿದ್ದೇನೆ ಎಂದರು.ನಿವೇದಿತ ತಂದೆ ರಮೇಶ್ ಆರ್, ತರಬೇತುದಾರ ಶರವಣ್ ಸೇರಿದಂತೆ ಇನ್ನಿತರರು ಸುದ್ದಿಗೋಷ್ಠಿಯಲ್ಲಿದ್ದರು.

ರೈತರ ತೋಟಗಳ ಮೇಲೆ ಅವೈಜ್ಞಾನಿಕ ಹೈಟೆನ್ಷನ್ ವಿದ್ಯುತ್ ವಿರೋಧಿಸಿ ಪ್ರತಿಭಟನೆ

ಶಿವಮೊಗ್ಗ: ರೈತರ ತೋಟಗಳ ಮೇಲೆ ಅವೈಜ್ಞಾನಿಕ ಹೈಟೆನ್ಷನ್ ವಿದ್ಯುತ್ ಮಾರ್ಗ ಹಾದು ಹೋಗುವುದನ್ನು ವಿರೋಧಿಸಿ ಶಿಕಾರಿಪುರದ ತಾಲೂಕು ಕಚೇರಿ ಎದುರು ನಡೆಯುತ್ತಿರುವ ಬೃಹತ್ ಪ್ರತಿಭಟನೆಯಲ್ಲಿ ಸಚಿವ ಮಧು ಬಂಗಾರಪ್ಪ ಮನವಿ ಸ್ವೀಕರಿಸುವ ಮೂಲಕ ತಾತ್ಕಾಲಿಕ ಅಂತ್ಯ ಹಾಡಲಾಗಿದೆ. ಕಳೆದ ಮೂರು ದಿನಗಳಿಂದ ಹೋರಾಟಗಾರ ತೀ.ನಾ.ಶ್ರೀನಿವಾಸ್ ಅವರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಯುತ್ತಿತ್ತು. ಬುಧವಾರ ಸಚಿವ ಮಧು ಬಂಗಾರಪ್ಪನವರು ಮನವಿ ಸ್ವೀಕರಿಸಿ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡುವ ಮೂಲಕ ಪ್ರತಿಭಟನೆಗೆ ತಾತ್ಕಾಲಿಕ ಇತಿಶ್ರೀ ಹಾಡಲಾಗಿದೆ. ಈಸೂರಿನಿಂದ ಶಿಕಾರಿಪುರದ ವರೆಗೆ 110/111 ಕೆವಿ ಎಸ್.ಪಿ. ಲೈನ್ ಡಿ.ಸಿ ಗೋಪುರವನ್ನು 4.5 ಕಿಮಿ ದೂರ ಕ್ರಮಿಸದೆ ಇದನ್ನ 23 ಕಿಮಿ ದೂರ ಕ್ರಮಿಸಿ ಬರುವುದರಿಂದ ಹಲವರ ರೈತರ ತೋಟಗಳು ಹಾಳಾಗಲಿದೆ. 4.5 ಕಿಮಿ ದೂರಕ್ಕೆ 12–15 ವಿದ್ಯುತ್ ಗೋಪುರಗಳು ಬರಲಿದೆ. ಇದರ ಬದಲಿಗೆ 45–50 ಗೋಪುರಗಳನ್ನ ನಿರ್ಮಿಸಲಾಗುತ್ತಿದೆ

ಕೃಷಿ ಚಟುವಟಿಕೆಗೆ ವಿದ್ಯುತ್ ವ್ಯತ್ಯಯವಾಗದಂತೆ ನೋಡಿಕೊಳ್ಳಿ: ಸಚಿವ ಎಸ್. ಮಧು ಬಂಗಾರಪ್ಪ

ಶಿವಮೊಗ್ಗ : ಜಿಲ್ಲೆಯಲ್ಲಿ ರೈತರ ಕೃಷಿ ಚಟುವಟಿಕೆಗಳಿಗೆ ವಿದ್ಯುತ್ ವ್ಯತ್ಯಯವಾಗದಂತೆ ಈಗಾಗಲೇ ಸರ್ಕಾರ ನಿಗಧಿಡಿಸಿದ ಸಮಯನುಸಾರ ನಿರಂತರವಾಗಿ ವಿದ್ಯುತ್ ಸರಬರಾಜು ಮಾಡುವಂತೆ ಸಚಿವ ಎಸ್. ಮಧು ಬಂಗಾರಪ್ಪ ಅವರು ಮೆಸ್ಕಾಂ ಅಭಿಯಂತರರಿಗೆ ಸೂಚಿಸಿದರು.

ಅವರು ಇಂದು ಶಿಕಾರಿಪುರದ ತಾಲೂಕು ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ತಾಲೂಕು ಅಭಿವೃದ್ಧಿ ಚಟುವಟಿಕೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

ಶಿಕಾರಿಪುರ, ಶಿರಾಳಕೊಪ್ಪ ಮತ್ತು ಸೊರಬ ಭಾಗಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ನಿರಂತರ ವ್ಯತ್ಯಾಯವಾಗುತ್ತಿರುವ ಕಾರಣ ಕೃಷಿ ಚಟುವಟಿಕೆಗಳಿಗೆ ತೀವ್ರ ಅಡಚಣೆ ಆಗುತ್ತಿರುವ ಬಗ್ಗೆ ಸಾರ್ವಜನಿಕರಿಂದ ಸಾಕಷ್ಟು ದೂರುಗಳು ಕೇಳಿ ಬರುತ್ತಿದ್ದು ಅದನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಇದರ ವ್ಯವಸ್ಥಿತ ನಿರ್ವಹಣೆಯ ಜವಾಬ್ದಾರಿ ಹೊತ್ತ ಅಧಿಕಾರಿಗಳು ವಿದ್ಯುತ್ ನ್ನು ಒದಗಿಸುವಂತೆ ಹಾಗೂ ಯಾವುದೇ ದೂರಗಳು ಬಾರದಂತೆ ನೋಡಿಕೊಳ್ಳಬೇಕು. ಮಾತ್ರವಲ್ಲ ಈ ಸಂಬಂಧ ಬರುವ ಸಾರ್ವಜನಿಕರ ಅಹವಾಲುಗಳಿಗೆ ಸಕಾಲಿಕವಾಗಿ ಸ್ಪಂದಿಸುವಂತೆ ಸೂಚಿಸಿದರು.

ತಾಲೂಕಿನ ಆಯ್ದ ಭಾಗಗಳಲ್ಲಿ ಟ್ರಾನ್ಸ್‌ಫರ್ಮರ್ ಗಳು ಹಾಳಾಗಿದ್ದು ದುರಸ್ತಿ ಮಾಡುವ ಬಗ್ಗೆ ಹಾಗೂ ಅಗತ್ಯವಿರುವೆಡೆಗಳಲ್ಲಿ ಹೊಸ ಟ್ರಾನ್ಸ್‌ಫರ್ಮರ್ ಗಳನ್ನು ಅಳವಡಿಸಬೇಕು. ಅದಕ್ಕಾಗಿ ತಾವು ತಮ್ಮ ಮೇಲಾಧಿಕಾರಿಗಳಿಗೆ ಸಲ್ಲಿಸಿದ ಪ್ರಸ್ತಾವನೆಯ ಪ್ರತಿಯನ್ನು ಕೊಟ್ಟಲ್ಲಿ ಕ್ರಮ ಕೈಗೊಳ್ಳಲಾಗುವುದು. ವಿದ್ಯುತ್ ಸಮಸ್ಯೆಯ ಇತ್ಯರ್ಥಕ್ಕೆ ಆದ್ಯತೆಯ ಮೇಲೆ ಕ್ರಮ ವಹಿಸುವಂತೆಯೂ ಸೂಚಿಸಿದ ಅವರು ಸಮಸ್ಯೆಯ ಶಾಶ್ವತ ಪರಿಹಾರಕ್ಕಾಗಿ ಮೆಸ್ಕಾಂನ ವ್ಯವಸ್ಥಾಪಕರೊಂದಿಗೆ

ಚರ್ಚಿಸಲಾಗುವುದು ಎಂದರು.

ತಾಲೂಕಿನಲ್ಲಿ ಏತ ನೀರಾವರಿ ಯೋಜನೆಗಳಲ್ಲಿ ಚಾನಲ್ ಗಳ ಒಣ ಭೂಮಿ ಹಾಗೂ ಕೊನೆಯ ಗ್ರಾಮಗಳಿಗೆ ಸಕಾಲದಲ್ಲಿ ನೀರು ಪೂರೈಸಿದ ಕೆರೆ ಕಟ್ಟೆ ಕಾಲುವೆಗಳನ್ನು ಭರ್ತಿ ಮಾಡಿದಲ್ಲಿ ಜನ ಜಾನುವಾರುಗಳಿಗೆ ಬೇಸಿಗೆಯಲ್ಲಿ ಕುಡಿಯುವ ನೀರಿನ ಪೂರೈಕೆಗೆ ಅನುಕೂಲವಾಗಲಿದೆ. ಇದರಿಂದಾಗಿ ಜನರ ನೀರಿನ ದಾಹ ಇಂಗಿಸಿದಂತಾಗಲಿದೆ ಎಂದ ಅವರು ಮಳೆಗಾಲದಲ್ಲಿ ಮಳೆ ನೀರನ್ನು ವ್ಯರ್ಥವಾಗಿ ಸಮುದ್ರಕ್ಕೆ ಬಿಡದಂತೆ ಕೆರೆಗಳನ್ನು ತುಂಬಿಸುವ ಮೂಲಕ ಸದ್ಬಳಕೆ ಮಾಡಿಕೊಳ್ಳುವಂತೆ ಸೂಚಿಸಿದರು. ಚಾನಲ್ ಗಳ ದುರಸ್ತಿ, ಹೂಳು ತೆಗೆಯುವ ಕಾರ್ಯಗಳಿಗೆ ಅನುದಾನದ ಅಗತ್ಯವಿದ್ದಲ್ಲಿ ಕೂಡಲೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಅವರು ಸೂಚಿಸಿದರು.

ತಾಲೂಕಿನಲ್ಲಿ ಜಾಲಜೀವನ್ ಮಿಷನ್ ಮತ್ತು ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿಯಲ್ಲಿ ಈಗಾಗಲೇ ಕೈಗೊಂಡಿರುವ ಯೋಜನೆಗಳ ಅನುಸ್ತಾನದಲ್ಲಿ ಅತೀವ ವಿಳಂಬವಾಗುತ್ತಿರುವುದು ಬೇಸರ ತಂದಿದೆ ಎಂದ ಅವರು ಸ್ಥಳೀಯವಾಗಿರುವ ಸಮಸ್ಯೆಗಳಿಗೆ ಕೂಡಲೇ ಪರಿಹಾರ ಕಂಡು–ಕೊಂಡು ಕಾಮಗಾರಿಗಳನ್ನು ಆರಂಭಿಸಿ, ಕುಡಿಯುವ ನೀರಿನ ಸಮಸ್ಯೆಯ ಶಾಶ್ವತ ಪರಿಹಾರಕ್ಕೆ ಅಧಿಕಾರಿಗಳು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಗೃಹಲಕ್ಷ್ಮಿ ಯೋಜನೆಯಡಿ ಫಲಾನುಭವಿಗಳ ಖಾತೆಗೆ ನೇರವಾಗಿ ಜಮೆಯಾಗುವ ಹಣವನ್ನು ಬ್ಯಾಂಗಳ ವ್ಯವಸ್ಥಾಪಕರು ಸಾಲದ ಖಾತೆಗೆ ಜಮಾ ಮಾಡಿಕೊಳ್ಳದಂತೆ ಸೂಚಿಸಿದರು. ಸೌಲಭ್ಯಕ್ಕಾಗಿ ಬಂದ ಅರ್ಜಿಗಳನ್ನು ತ್ವರಿತವಾಗಿ ವಿಲೇ ಮಾಡುವಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಸೂಚಿಸಿದರು.

ತಾಲೂಕಿನ 4000ಎಕರೆ ಪ್ರದೇಶದಲ್ಲಿ ಬೆಳೆದಿದ್ದ ಅಡಿಕೆಗೆ ಕೊಳೆರೋಗ ತಗುಲಿದ್ದರಿಂದಾಗಿ ಶೇ. 30ರಷ್ಟು ಬೆಳೆ ಹಾನಿಗೋಳಗಾಗಿದೆ. ಬೆಳೆ ಹಾನಿಗೆ ಪರಿಹಾರಧನ ಬಿಡುಗಡೆಗೊಳಿಸುವಂತೆ ಸರ್ಕಾರಕ್ಕೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ.–ಕೃಷಿ ಸಹಾಯಕ ನಿರ್ದೇಶಕರು. ಶಿಕಾರಿಪುರ.

ಗ್ರಾಮೀಣ ಪ್ರದೇಶಗಳಲ್ಲಿನ ರೈತರು ತಮ್ಮ ಗ್ರಹ ಚಟುವಟಿಕೆಗಳಿಗಾಗಿ ಕೆರೆಗಳಿಂದ ಮಣ್ಣನ್ನು ಬಳಸಿಕೊಳ್ಳುತ್ತಿದ್ದಲ್ಲಿ ಕಂದಾಯ ಅಧಿಕಾರಿಗಳು ಮಾನವೀಯ ನೆಲೆಯಲ್ಲಿ ಸಹಕರಿಸುವಂತೆ ಹಾಗೂ ಯಾವುದೇರಾಯಧನ ಭರಿಸದೆ ಮಣ್ಣನ್ನು ವಾಣಿಜ್ಯ ಉದ್ದೇಶಕ್ಕಾಗಿ ಬಳಸಿಕೊಳ್ಳುತ್ತಿದ್ದಲ್ಲಿ ನಿಯಮಾನುಸಾರ ಕಠಿಣ ಕಾನೂನು ಕ್ರಮಗಳನ್ನು ಅನುಸರಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು. ಪ್ರಸಕ್ತ ಸಾಲಿನಲ್ಲಿ ಎಸ್ ಎಸ್ ಎಲ್ ಸಿ ಪರೀಕ್ಷಾ ಪಲಿತಾಂಶ ಉತ್ತಮವಾಗಿರುವಂತೆ ನೋಡಿಕೊಳ್ಳಲು ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವಿಶೇಷ ಗಮನಹರಿಸುವಂತೆ ಸೂಚಿಸಲಾಗಿದೆ. ಅಲ್ಲದೆ ಪರೀಕ್ಷಾ ಪೂರ್ವ ತರಬೇತಿ ಹಾಗೂ ವಿಶೇಷ ತರಗತಿಗಳನ್ನು ನಡೆಸಲಾಗುತ್ತಿದೆ ಎಂದರು.

ಪರೀಕ್ಷೆಗಳನ್ನು ನಿಯಮಾನಸಾರ ಕಟ್ಟುನಿಟ್ಟಾಗಿ ನಡೆಸಲು ಸೂಚಿಸಲಾಗಿದೆ ವಿದ್ಯಾರ್ಥಿಗಳು ಯಾವುದೇ ಆತಂಕವಿಲ್ಲದೆ ನಿರ್ಭೀತಿಯಿಂದ ಪರೀಕ್ಷೆಗೆ ಹಾಜರಾಗುವಂತೆ ಸೂಚಿಸಿದ ಅವರು ಅನುತ್ತೀರ್ಣ ವಿದ್ಯಾರ್ಥಿಗಳಿಗಾಗಿ ಪೂರಕ ಪರೀಕ್ಷೆಗಳನ್ನು ಕೂಡ ಏರ್ಪಡಿಸಲಾಗಿದೆ ಎಂದವರು ನುಡಿದರು.

ಸಭೆಯಲ್ಲಿ ಸಾಗರ ಉಪ ವಿಭಾಗಾಧಿಕಾರಿ ಯತೀಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ನಟರಾಜ್, ತಹಶೀಲ್ದಾರ್ ಮಲ್ಲೇಶಪ್ಪ ಪೂಜಾರ್ ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ನಾಗರಾಜ್ ಸೇರಿದಂತೆ ತಾಲೂಕಿನ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ನಂತರ ಸಚಿವರು ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದರು.

ಮುಖ್ಯಮಂತ್ರಿಗಳ ವಿಶೇಷ ಅನುದಾನದಿಂದ ಸಮಗ್ರ ಅಭಿವೃದ್ಧಿ: ಹೆಚ್.ಡಿ. ತಮ್ಮಯ್ಯ

ಚಿಕ್ಕಮಗಳೂರು: ಮುಂದಿನ ದಿನಗಳಲ್ಲಿ ಚಿಕ್ಕಮಗಳೂರು ನಗರವನ್ನು ಮುಖ್ಯಮಂತ್ರಿಗಳ ವಿಶೇಷ ಅನುದಾನ ಪಡೆದು ಸಮಗ್ರ ಅಭಿವೃದ್ಧಿಪಡಿಸುವುದಾಗಿ ಶಾಸಕ ಎಚ್.ಡಿ.ತಮ್ಮಯ್ಯ ಭರವಸೆ ನೀಡಿದರು.

ಬುಧವಾರ ನಗರದ ಕೋಟೆ ಬಡಾವಣೆ ಬೇಲೂರು ರಸ್ತೆಯ ನೂತನ ಬಸ್ ನಿಲ್ದಾಣ, ನಗರದ ಆಯ್ದ ಪ್ರಮುಖ ಭಾಗಗಳಲ್ಲಿ ಅತ್ಯುನ್ನತ ಮಾದರಿಯ 4 ಬಸ್ ನಿಲ್ದಾಣಗಳ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿಗಳ ವಿಶೇಷ ಅನುದಾನ ಬಿಡುಗಡೆಯಾದ ಬಳಿಕ ಕಾಮಗಾರಿ ಆರಂಭಿಸಿ, ಮೇ ತಿಂಗಳೊಳಗೆ ನಗರದ ಎಲ್ಲಾ ರಸ್ತೆಗಳನ್ನು ಸಂಪೂರ್ಣ ಅಭಿವೃದ್ಧಿಪಡಿಸಲು ಗುರಿ ಹೊಂದಲಾಗಿದೆ ಎಂದರು.

ಪಕ್ಷಾತೀತವಾಗಿ ಎಲ್ಲಾ ಪದಾಧಿಕಾರಿಗಳು ಭಾಗವಹಿಸಿ, ಅಭಿವೃದ್ಧಿಗೆ ಕೈಜೋಡಿಸಿರುವ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿ, ಇಲ್ಲಿ ಒಂದು ಬಸ್ ನಿಲ್ದಾಣ ನಿರ್ಮಾಣ ಮಾಡಬೇಕೆಂಬ ಹಲವು ದಿನಗಳ ಬೇಡಿಕೆ ಇಂದು ಈಡೇರಿದೆ. ರಾಜ್ಯಸಭಾ ಸದಸ್ಯ ಜಯರಾಂ ರಮೇಶ್ ನಿಧಿಯಿಂದ 10.92 ಲಕ್ಷ ರೂ. ಹಾಗೂ ತಮ್ಮ ಶಾಸಕರ ನಿಧಿಯಿಂದ 5 ಲಕ್ಷ ರೂ. ನಿಧಿಯಲ್ಲಿ ಈ ಬಸ್ ನಿಲ್ದಾಣ ನಿರ್ಮಿಸಲಾಗುತ್ತಿದೆ ಎಂದರು. 10.90 ಲಕ್ಷ ರೂ. ವೆಚ್ಚದಲ್ಲಿ ಹಿರೇಮಗಳೂರಿನಲ್ಲಿ ಬಸ್ ನಿಲ್ದಾಣ, ನಗರಾಭಿವೃದ್ಧಿ ಪ್ರಾಧಿಕಾರದ ಬಡಾವಣೆ ಕಲ್ಯಾಣ ನಗರದಲ್ಲಿ 10 ಲಕ್ಷ ರೂ. ವೆಚ್ಚದಲ್ಲಿ ಬಸ್ ನಿಲ್ದಾಣ, ಕಣಿವೆ ರುದ್ರೇಶ್ವರ ದೇವಸ್ಥಾನದ ಬಳಿ ಹೌಸಿಂಗ್ ಬೋರ್ಡ್ 6ನೇ ಹಂತದ ಜನರಿಗೆ, ದಾಸರಹಳ್ಳಿ ಜನರಿಗೆ ಅನುಕೂಲವಾಗುವಂತೆ 10.90 ಲಕ್ಷ ರೂ. ವೆಚ್ಚದಲ್ಲಿ ಬಸ್ ನಿಲ್ದಾಣ ನಿರ್ಮಾಣ ಮಾಡಲಾಗುವುದು ಎಂದರು.

ನಗರದಲ್ಲಿ ಹಾನಿಯಾಗಿರುವ ರಸ್ತೆಗಳ ದುರಸ್ತಿಗೆ ಈಗಾಗಲೇ ಕಾಮಗಾರಿ ಆರಂಭಗೊಂಡಿದ್ದು, ಅಂಚೆ ಕಚೇರಿ ರಸ್ತೆ, ಒಕ್ಕಲಿಗರ ಸಮುದಾಯ ಭವನದ ರಸ್ತೆ, ಶಂಕರಪುರ 5ನೇ ಕ್ರಾಸ್ ರಸ್ತೆ ಸೇರಿದಂತೆ ಎಲ್ಲಾ ರಸ್ತೆಗಳನ್ನು ದುರಸ್ತಿಪಡಿಸಲು ಜಯರಾಂ ರಮೇಶ್ ಅವರ ಮನವೊಲಿಸಿ ಅನುದಾನ ತಂದಿರುವ ಜೊತೆಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಚಿಕ್ಕಮಗಳೂರು ನಗರಕ್ಕೆ ಸೀಮಿತವಾಗಿ ವಿಶೇಷ ಅನುದಾನ ಬಿಡುಗಡೆ ಮಾಡುವಂತೆ ಮನವಿ ಮಾಡಿರುವುದಾಗಿ ಶಾಸಕ ಎಚ್.ಡಿ.ತಮ್ಮಯ್ಯ ತಿಳಿಸಿದರು.

ನಗರದಲ್ಲಿ ಹಾನಿಯಾಗಿರುವ ರಸ್ತೆಗಳ ದುರಸ್ತಿಗೆ ಈಗಾಗಲೇ ಕಾಮಗಾರಿ ಆರಂಭಗೊಂಡಿದ್ದು, ಅಂಚೆ ಕಚೇರಿ ರಸ್ತೆ, ಒಕ್ಕಲಿಗರ ಸಮುದಾಯ ಭವನದ ರಸ್ತೆ, ಶಂಕರಪುರ 5ನೇ ಕ್ರಾಸ್ ರಸ್ತೆ ಸೇರಿದಂತೆ ಎಲ್ಲಾ ರಸ್ತೆಗಳನ್ನು ದುರಸ್ತಿಪಡಿಸಲು ಜಯರಾಂ ರಮೇಶ್ ಅವರ ಮನವೊಲಿಸಿ ಅನುದಾನ ತಂದಿರುವ ಜೊತೆಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಚಿಕ್ಕಮಗಳೂರು ನಗರಕ್ಕೆ ಸೀಮಿತವಾಗಿ ವಿಶೇಷ ಅನುದಾನ ಬಿಡುಗಡೆ ಮಾಡುವಂತೆ ಮನವಿ ಮಾಡಿರುವುದಾಗಿ ಶಾಸಕ ಎಚ್.ಡಿ.ತಮ್ಮಯ್ಯ ತಿಳಿಸಿದರು.

ಈ ಸಂದರ್ಭದಲ್ಲಿ ಸಿಡಿಎ ಮಾಜಿ ಅಧ್ಯಕ್ಷ ಎಂ.ಎಲ್. ಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಪಿ.ಮಂಜೇಗೌಡ, ನಗರ ಕಾಂಗ್ರೆಸ್ ಅಧ್ಯಕ್ಷ ತನೂಜ್ ನಾಯ್ಡು, ಗ್ರಾಮಸ್ಥರಾದ ದಯಾನಂದ ನಾಯ್ಡು, ವೆಂಕಟೇಶ್ ನಾಯ್ಡು, ನಗರಸಭೆ ಸದಸ್ಯರಾದ ಮಧುಕುಮಾರ್ ರಾಜ್ ಅರಸ್, ಶಾದಬ್, ಆನಂದ, ಸೋಮಣ್ಣ, ನಗರಸಭೆ ಪೌರಾಯುಕ್ತ ಬಿ.ಸಿ.ಬಸವರಾಜ್, ಸಿಡಿಎ ಆಯುಕ್ತರಾದ ನಾಗರತ್ನ ಮತ್ತಿತರರಿದ್ದರು.

ಸಿಎಂನೊಂದಿಗೆ ಚರ್ಚೆ: ಶಾಸಕ

ನಗರದಲ್ಲಿ ಹಾನಿಯಾಗಿರುವ ರಸ್ತೆಗಳ ದುರಸ್ತಿಗೆ ಈಗಾಗಲೇ ಕಾಮಗಾರಿ ಆರಂಭಗೊಂಡಿದ್ದು, ಅಂಚೆ ಕಚೇರಿ ರಸ್ತೆ, ಒಕ್ಕಲಿಗರ ಸಮುದಾಯ ಭವನದ ರಸ್ತೆ, ಶಂಕರಪುರ 5ನೇ ಕ್ರಾಸ್ ರಸ್ತೆ ಸೇರಿದಂತೆ ಎಲ್ಲಾ ರಸ್ತೆಗಳನ್ನು ದುರಸ್ತಿಪಡಿಸಲು ಜಯರಾಂ ರಮೇಶ್ ಅವರ ಮನವೊಲಿಸಿ ಅನುದಾನ ತಂದಿರುವ ಜೊತೆಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಚಿಕ್ಕಮಗಳೂರು ನಗರಕ್ಕೆ ಸೀಮಿತವಾಗಿ ವಿಶೇಷ ಅನುದಾನ ಬಿಡುಗಡೆ ಮಾಡುವಂತೆ ಮನವಿ ಮಾಡಿರುವುದಾಗಿ ಶಾಸಕ ಎಚ್.ಡಿ.ತಮ್ಮಯ್ಯ ತಿಳಿಸಿದರು.

ಪಾಲಕರು, ಶಿಕ್ಷಕರ ಪರಿಶ್ರಮಕ್ಕೆ ವಿದ್ಯಾರ್ಥಿಗಳು ಬೆಲೆ ಕೊಡಿ: ಸುಜಾತ

ಚಿಕ್ಕಮಗಳೂರು: ವರ್ಷನುಗಟ್ಟಲೇ ಪಾಲಕರ ಪರಿಶ್ರಮ ಹಾಗೂ ಶಿಕ್ಷಕರ ಬೋಧನೆಗೆ ವಿದ್ಯಾರ್ಥಿಗಳು ಅಧ್ಯಯನ ಮೂಲಕ ಬೆಲೆಕೊಡಬೇಕು. ಅಂತಿಮ ಪರೀಕ್ಷೆಯಲ್ಲಿ ಧೈರ್ಯ ಮತ್ತು ಆತ್ಮವಿಶ್ವಾಸದ ಸಾಮರ್ಥ್ಯ ಮೈಗೂಡಿಸಿಕೊಳ್ಳಬೇಕು ಎಂದು ನಗರಸಭಾ ಅಧ್ಯಕ್ಷೆ ಸುಜಾತ ಶಿವಕುಮಾರ್ ಹೇಳಿದರು.

ನಗರದ ಕುವೆಂಪು ಕಲಾಮಂದಿರದಲ್ಲಿ ಕ್ಷೇತ್ರ ಶಿಕ್ಷಣ ಇಲಾಖೆ, ಸಾಯಿ ಏಂಜೆಲ್ಸ್ ಪಿಯು ಕಾಲೇಜು ಚಿಕ್ಕಮಗಳೂರು ಹಾಗೂ ಕುವೆಂಪು ಯೂನಿವರ್ಸಿಟಿ ಯೂನಿಯನ್ ಸಹಯೋಗದಲ್ಲಿ ಇಂದು ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ಬೀಳ್ಕೊಡಿಗೆ ಹಾಗೂ ಪರೀಕ್ಷೆ ಕುರಿತು ಪ್ರೇರಣಾ ಭಾಷಣ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಂತಿಮ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳಿಗೆ ನಕರಾತ್ಮಕ ಚಿಂತನೆಗಳು ಸಹಜ. ಎಲ್ಲವನ್ನು ಬದಿಗಿರಿಸಿ ಸಕಾರಾತ್ಮಕವಾಗಿ ಯೋಚಿಸಬೇಕು. ಶಾಲೆಯ ಕ್ರೀ